ಸಂಪುಟ : 9 ಸಂಚಿಕೆ 79 ಪುಟ : 4 ಬೆಲೆ: 3.00 ಶನಿವಾರ ಎಪ್ರಿಲ್ 27 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 79 Pages : 4 Price : 3.00 Saturday April 27 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮತದಾನದ ದಿನ ಅಗತ್ಯ ಸೌಲಭ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಮೇ 7ರಂದು ಮತದಾನ ಜರುಗಲಿದ್ದು, ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಸುಗಮವಾಗಿ ಮತದಾನ ಮಾಡಲು ಅಗತ್ಯ ವ್ಯವಸ್ಥೆ ಕಲ್ಪಿಸಲಾಗುವುದು.

ಅರ್ಹ ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಮತದಾನದಿಂದ ಹೊರಗುಳಿಯದೇ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ಅವರು ಕೋರಿದ್ದಾರೆ.

ಗಾಲಿ ಕುರ್ಚಿಗಳು, ಮತಗಟ್ಟೆಯಲ್ಲಿ ಇಳಿಜಾರು ಮತ್ತು ರೈಲಿಂಗ್ಸ್, ಮತಯಂತ್ರದಲ್ಲಿ ಬ್ರೈಲ್ ಲಿಪಿ, ಮತಗಟ್ಟೆಗೆ ಬರಲು ಸಾರಿಗೆ ವ್ಯವಸ್ಥೆ, ತರಬೇತಿ ಪಡೆದ ಸ್ವಯಂ ಸೇವಕರು, ಸನ್ನೆ ಸೂಚನಾ ಫಲಕಗಳು, ವಿಕಲಚೇತನ ಸ್ನೇಹಿ ಶೌಚಾಲಯ, ಮತದಾನಕ್ಕಾಗಿ ಪ್ರತ್ಯೇಕ ಸಾಲಿನ ವ್ಯವಸ್ಥೆ, ಭೂತ ಕನ್ನಡಿ, ಕುಡಿಯುವ ನೀರಿನ ವ್ಯವಸ್ಥೆ, ಪ್ರಥಮ ಚಿಕಿತ್ಸಾ ಪೆಟ್ಟಿಗೆ, ವಿಕಲಚೇತನರಿಗೆ ಪ್ರತ್ಯೇಕ ವಾಹನ ನಿಲ್ದಾಣ ವ್ಯವಸ್ಥೆ, ಅಂಧ ಮತದಾರರಿಗೆ ಒಬ್ಬರು ಸಹಾಯಕರ ವ್ಯವಸ್ಥೆ, ಮನೆಯಿಂದಲೇ ಮತದಾನ ಮಾಡುವ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಹಾಗೂ ತೀವ್ರತರ ವಿಕಲಚೇತನರಿಗೆ ಬ್ಯಾಲಿಟ್ ಪೇಪರ್ ವ್ಯವಸ್ಥೆ, ಮತದಾನದ ಕುರಿತು ಮಾಹಿತಿ ಪಡೆಯಲು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಪ್ರತ್ಯೇಕ ಸಹಾಯವಾಣಿ ಕೇಂದ್ರ, ವಿಕಲಚೇತನರ ಆ್ಯಪ್, ವೋಟರ್ ಹೆಲ್ಪ್‌ಲೈನ್, ಶ್ರವಣದೋಷ ಮತದಾರರಿಗೆ ಸನ್ನೆ ಭಾಷೆಯಲ್ಲಿ ಮಾಹಿತಿ ಮತ್ತಿತರ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಮದ್ಯ ವಹಿವಾಟಿನ ಶುಷ್ಕ ದಿನ ಘೋಷಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಮೇ 7ರಂದು ಮತದಾನ ನಡೆಯಲಿದ್ದು, ಚುನಾವಣೆಯ ಮತ ಎಣಿಕೆಯು ಜೂನ್ 4ರಂದು ಜರುಗಲಿದೆ. ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾನ ಪೂರ್ಣಗೊಳ್ಳುವ 48 ಗಂಟೆಗಳ ಅವಧಿಯಲ್ಲಿ ಅಂದರೆ ಮೇ 5ರಂದು ಸಂಜೆ 6 ಗಂಟೆಯಿಂದ ಮೇ 8ರ ಬೆಳಿಗ್ಗೆ 6 ಗಂಟೆಯವರೆಗೆ ಹಾಗೂ ಚುನಾವಣಾ ಫಲಿತಾಂಶದ ದಿನವಾದ ಜೂನ್ 4ರಂದು ಬೆಳಿಗ್ಗೆ 6 ಗಂಟೆಯಿಂದ ಜೂನ್ 5ರ ಬೆಳಿಗ್ಗೆ 6 ಗಂಟೆಯವರೆಗೆ ಶುಷ್ಕ ದಿನಗಳೆಂದು ಘೋಷಿಸಲಾಗಿದೆ.

ಈ ದಿನಗಳಂದು ಚುನಾವಣೆ ಪ್ರಕ್ರಿಯೆಯ ಪರಿಶುದ್ಧತೆ, ಶಿಸ್ತು ಮತ್ತು ಶಾಂತಿಯನ್ನು ಕಾಪಾಡುವುದ್ದಾಗಿ ಗದಗ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಾದ 65-ಶಿರಹಟ್ಟಿ (ಎಸ್‌ಸಿ), 66-ಗದಗ ಮತ್ತು 67-ರೋಣ ಮತ್ತು 68-ನರಗುಂದ ಮತಕ್ಷೇತ್ರಗಳಲ್ಲಿ ಮದ್ಯ ಮಾರಾಟ ನಿರ್ಬಂಧಿಸಿ ಮದ್ಯ ವಹಿವಾಟಿನ ಶುಷ್ಕ ದಿನವೆಂದು ಘೋಷಿಸಲಾಗಿದೆ.

ಈ ಅವಧಿಯಲ್ಲಿ ಮದ್ಯ ಮಾರಾಟ, ಮದ್ಯದ ಅಂಗಡಿಗಳು, ಬಿಯರ್ ಬಾರುಗಳು, ಕ್ಲಬ್‌ಗಳು ಮತ್ತು ಕೆಎಸ್‌ಬಿಸಿಎಲ್ ಮದ್ಯ ಡಿಪೋಗಳನ್ನು ಮುಚ್ಚತಕ್ಕದ್ದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಆದೇಶಿಸಿದ್ದಾರೆ.

## ಅಂಚೆ ಮತ ಕೇಂದ್ರ ಸ್ಥಾಪನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ ಅಗತ್ಯ ಸೇವೆಗಳ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಗೈರು ಮತದಾರರ (ಎವಿಇಎಸ್) ವರ್ಗದ ಮತದಾರರಿಗೆ ಸ್ಥಾಪಿಸಲಾದ ಅಂಚೆ ಮತ ಕೇಂದ್ರ (ಪಿವಿಸಿ) ಗಳನ್ನು ಸ್ಥಾಪಿಸಲು ಚುನಾವಣಾ ಆಯೋಗದಿಂದ ನಿರ್ದೇಶನ ನೀಡಿದೆ.

ಅದರಂತೆ ಹಾವೇರಿ-ಗದಗ-10 ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ರ ಸಂಬಂಧ 66-ಗದಗ ಜಿಲ್ಲೆಗೆ ಸಂಬಂಧಿಸಿದಂತೆ ಅಗತ್ಯ ಸೇವೆಗಳ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಅಂಚೆ ಮತಪತ್ರದ ಸೌಲಭ್ಯಗಳನ್ನು ಒದಗಿಸಬೇಕಿದೆ.

ಈ ಮತದಾರರಿಗೆ ಅನುಕೂಲವಾಗುವಂತೆ ಅಂಚೆ ಮತ ಕೇಂದ್ರವನ್ನು ಜಿಲ್ಲಾಧಿಕಾರಿಗಳ ಹಾಗೂ ಚುನಾವಣಾಧಿಕಾರಿಗಳ ಕಚೇರಿ 10- ಹಾವೇರಿ ಲೋಕಸಭಾ ಕ್ಷೇತ್ರ , ಹಾವೇರಿ ಇಲ್ಲಿ ಸ್ಥಾಪಿಸಲಾಗಿದ್ದು, ಅಗತ್ಯ ಸೇವೆಗಳಡಿ ಕೆಲಸ ನಿರ್ವಹಿಸುತ್ತಿರುವ ಮತದಾರರು ಮೇ 1 , 2 ಮತ್ತು 3 ರಂದು (ಎವಿಇಎಸ್) ವರ್ಗದ ಮತದಾರರು ಈ ಸ್ಥಳದಲ್ಲಿ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿರುವುದರಿಂದ ಎಲ್ಲಾ (ಎವಿಇಎಸ್) ಮತದಾರರು ಮತ ಚಲಾಯಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಏಕಕಾಲದಲ್ಲಿ ಒಂದೇ ಕುಟುಂಬದ 85 ಮಂದಿ ಮತದಾನ



■ ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ

ಲೋಕಸಭಾ ಚುನಾವಣೆ ಹಿನ್ನೆಲೆ, ರಾಜ್ಯದ 14 ಕ್ಷೇತ್ರಗಳಲ್ಲಿ ಮತದಾನದ ಪ್ರಕ್ರಿಯೆ ಬಿರುಸಿನಿಂದ ಸಾಗಿದೆ. ಹಲವು ಜನ ತಮ್ಮ ಮತದಾನ ಮಾಡಲು ಮತಗಟ್ಟೆಗೆ ತೆರಳುತ್ತಿದ್ದಾರೆ. ಇದರಲ್ಲಿ ಅಚ್ಚರಿಯೆಂಬಂತೆ ಒಂದೇ ಕುಟುಂಬದ 85 ಮಂದಿ ಏಕಕಾಲದಲ್ಲಿ ಮತದಾನ ಮಾಡಿದ ಘಟನೆ ಚಿಕ್ಕಬಳ್ಳಾಪುರದಲ್ಲಿ ನಡೆದಿದೆ.

ಚಿಕ್ಕಬಳ್ಳಾಪುರದಲ್ಲಿ ತಾಯಿ-ಮಗಳು-ಮೊಮ್ಮಗಳು ಸೇರಿದಂತೆ ಒಂದೇ ಕುಟುಂಬದ 85 ಮಂದಿ ಮತ ಹಾಕಿದ್ದಾರೆ. ಚಿಕ್ಕಬಳ್ಳಾಪುರ ನಗರದ ಮತಗಟ್ಟೆ ಸಂಖ್ಯೆ 161ರಲ್ಲಿ ವಾರ್ಡ್ ನಂಬರ್ 19ರ ನಿವಾಸಿಗಳು ತಮ್ಮ ಹಕ್ಕು ಚಲಾಯಿಸಿದ್ದಾರೆ.

ಈ ಕುಟುಂಬದ ಸದಸ್ಯರೆಲ್ಲರೂ ಮತದಾನದ ದಿನ ಒಂದೆಡೆ ಸೇರಿ, ಎಲ್ಲರೂ ಸೇರಿ ಮತಗಟ್ಟೆಗೆ ತೆರಳಿ ಮತದಾನ ಮಾಡುವ ಸಂಪ್ರದಾಯವನ್ನು ರೂಢಿ ಮಾಡಿಕೊಂಡು ಬಂದಿದ್ದಾರೆ.

### ಕಾಂಗ್ರೆಸ್ ಪ್ರಚಾರದ ಬಗ್ಗೆ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಆರೋಪ

# ಗ್ಯಾರಂಟಿ ಕಾರ್ಡ್ ವಿತರಿಸಿ ಆಮಿಷ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ಸಚಿವರ ತವರು ಕ್ಷೇತ್ರದಲ್ಲೇ ಕಾಂಗ್ರೆಸ್ ಕಾರ್ಯಕರ್ತರು ನಿಯಮಗಳನ್ನು ಉಲ್ಲಂಘನೆ ಮಾಡಿದ್ದಾರೆ. ಮತದಾರರಿಗೆ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸಿ, ಅವರಿಂದ ಆಧಾರ್ ಕಾರ್ಡ್, ರೇಷನ್ ಕಾರ್ಡ್ ಇತ್ಯಾದಿ ದಾಖಲೆಗಳನ್ನು ಪಡೆಯುವ ಮೂಲಕ ವೈಯಕ್ತಿಕ ಮಾಹಿತಿ ಸಂಗ್ರಹಣೆ ಮತ್ತು ಆಮಿಷ ಒಡ್ಡುವ ಕೆಲಸ ಮಾಡುತ್ತಿದ್ದಾರೆ. ಈ ಬಗ್ಗೆ ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿಗಳಿಗೆ ದೂರು ನೀಡಲಾಗಿದೆ ಎಂದು ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಆರೋಪಿಸಿದರು.

ಶುಕ್ರವಾರ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿಯವರ ಗೆಲುವು ನಿಶ್ಚಿತ ಎನ್ನುವ ವಾತಾವರಣವಿದೆ. ಇದರಿಂದ ಹತಾಶರಾಗಿರುವ ಕಾಂಗ್ರೆಸ್ ನಾಯಕರು ಗ್ಯಾರಂಟಿ ಕಾರ್ಡ್ ಕೊಟ್ಟು ಮತದಾರರಿಗೆ ಆಮಿಷ ಒಡ್ಡುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.




ಗ್ಯಾರಂಟಿ ಕಾರ್ಡ್ ನೀಡುವುದು ಮತದಾರರಿಗೆ ಆಮಿಷ ನೀಡಿದಂತೆ ಎಂದು ಚುನಾವಣಾ ಆಯೋಗ ಸ್ಪಷ್ಟವಾಗಿ ತಿಳಿಸಿದೆ. ಹೀಗಿದ್ದರೂ, ಕಾಂಗ್ರೆಸ್ ಕಾರ್ಯಕರ್ತರು ಕಾರ್ಡ್ ಹಂಚಿಕೆಯಲ್ಲಿ ತೊಡಗಿದ್ದಾರೆ. ಇಂಥವರ ವಿರುದ್ಧ ಚುನಾವಣಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅನಿಲ ಮೆಣಸಿನಕಾಯಿ ಒತ್ತಾಯಿಸಿದರು.

ಕಾಂಗ್ರೆಸ್ ಪ್ರಣಾಳಿಕೆಯನ್ನು ಗಮನಿಸಿದರೆ ಅಭಿವೃದ್ಧಿಗೆ ಯಾವುದೇ ಆದ್ಯತೆ ನೀಡದಿರುವುದು ಸ್ಪಷ್ಟವಾಗಿದೆ. ಬಿಜೆಪಿ ವಾರ್ಷಿಕ 2 ಕೋಟಿ ಉದ್ಯೋಗ ಸೃಷ್ಟಿ ಮಾಡಿಲ್ಲ ಎಂದು ಆರೋಪಿಸುವ ಕಾಂಗ್ರೆಸ್ ನಾಯಕರು, ತಮ್ಮ ಪ್ರಣಾಳಿಕೆಯನ್ನು ಉದ್ಯೋಗ ಸೃಷ್ಟಿಗೆ ಯಾಕೆ ಆದ್ಯತೆ ಕೊಟ್ಟಿಲ್ಲ? ಯುವಕರಿಗೆ 1 ಲಕ್ಷ ರೂಪಾಯಿ ಕೊಡುವ ಭರವಸೆ ನೀಡಿದ್ದಾರೆಯೇ ಹೊರತು ಉದ್ಯೋಗ ಕೊಡುವ ಭರವಸೆ ನೀಡಿಲ್ಲ.

> ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಮಾತನಾಡಿ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ ಮಾಡುವ ಭರವಸೆ ನೀಡಿದ್ದಾರೆ. ಸದ್ಯ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರದಲ್ಲಿದೆ. ಮೊದಲು ರಾಜ್ಯದ ರೈತರ ಸಾಲ ಮನ್ನಾ ಮಾಡಿ ಜನರ ವಿಶ್ವಾಸ ಗಳಿಸಿ ಮತ ಕೇಳಲಿ ಎಂದು ಸವಾಲು ಹಾಕಿದರು.

ದೇಶದ ಬಜೆಟ್ 45 ಲಕ್ಷ ಕೋಟಿ ರೂಪಾಯಿ ಇದ್ದರೂ 100 ಲಕ್ಷ ಕೋಟಿ ರೂಪಾಯಿಗಳ ಗ್ಯಾರಂಟಿ ಕಾರ್ಯಕ್ರಮ ಘೋಷಣೆ ಮಾಡಿದ್ದಾರೆ. ಆ ಹಣ ಎಲ್ಲಿಂದ ತರುತ್ತಾರೆ? ಇದೇ ರೀತಿ ಉಚಿತ ಯೋಜನೆಗಳನ್ನು ಕೊಡುತ್ತಾ ಹೋದರೆ ದೇಶ ದಿವಾಳಿಯಾಗಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರಾದ ಕಾಂತಿಲಾಲ್ ಬನ್ಸಾಲಿ, ಸಂಗಮೇಶ ದುಂದೂರ, ಮಂಜಣ್ಣ ಮುತ್ತಿನಪೆಂಡಿಮಠ, ಮುತ್ತಣ್ಣ ಗದಗಿನ, ವಸಂತ ಪಡಗದ, ಪರಮೇಶ ನಾಯಕ, ರವಿಕಾಂತ ಅಂಗಡಿ, ಆನಂದ ಸೇಠ, ಪ್ರಫುಲ್ ಪುಣೇಕರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕಾಲ್ನಡಿಗೆ ಜಾಥಾ

# ಪ್ರತಿಯೊಬ್ಬರ ಮತವೂ ದೊಡ್ಡ ಶಕ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜ್ಞಾವಂತರ ಮತದಾನದ ಪ್ರಮಾಣ ಕಡಿಮೆಯಾದರೆ ದೇಶಕ್ಕೆ ಗಂಡಾಂತರ ತಪ್ಪಿದ್ದಲ್ಲ. ಪ್ರಜಾಪ್ರಭುತ್ವದ ತಾಯಿಬೇರಿನಂತಿರುವ ಮತದಾನ ಪ್ರಕ್ರಿಯೆಯಿಂದ ಪ್ರಜ್ಞಾವಂತರು ದೂರ ಉಳಿಯಬಾರದು ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ ಅಭಿಪ್ರಾಯಪಟ್ಟರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಶುಕ್ರವಾರ ಆಯೋಜಿಸಿದ್ದ ಕಾಲ್ನಡಿಗೆ ಜಾಥಾ ಹಾಗೂ ಮನೆ ಮನೆ ಭೇಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗದಗ ತಾಲೂಕು ಸ್ವೀಪ್ ಸಮಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಹಯೋಗದಲ್ಲಿ ಕಳೆದ ಬಾರಿಯ ಚುನಾವಣೆಯಲ್ಲಿ ಕಡಿಮೆ ಪ್ರಮಾಣದ ಮತದಾನ ಕೇಂದ್ರಗಳಲ್ಲಿ ಕಾಲ್ನಡಿಗೆ ಜಾಥಾ ಮೂಲಕ




ಬೃಹತ್ ಮಟ್ಟದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಎಂದರು.

ತಾಲೂಕು ಸ್ವಿಪ್ ಸಮಿತಿ ಅಧ್ಯಕ್ಷ ಮಾಣಿಕರಾವ ಪಾಟೀಲ ಮಾತನಾಡಿ, ಕಡಿಮೆ ಮತದಾನವಾದ ಮತಗಟ್ಟೆಗಳ ವ್ಯಾಪ್ತಿಯ ಮನೆ ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸಲಾಗುತ್ತಿದೆ. ಈ ಅಭಿಯಾನದ ಅಂಗವಾಗಿ ಈ ಪ್ರದೇಶಗಳಲ್ಲಿ ಈ ಸಾರಿ ನೂರಕ್ಕೆ ನೂರರಷ್ಟು ಮತದಾನವಾಗಬೇಕು. ಅದಕ್ಕಾಗಿ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಕಾಲ್ನಡಿಗೆ ಜಾಥಾ ಹಾಗೂ ಮನೆ ಮನೆ ಭೇಟಿ ನೀಡುವ ಮೂಲಕ ಎಲ್ಲರೂ

> ಬೆಟಗೇರಿಯ ಸಿಎಸ್‌ಐ ಆಸ್ಪತ್ರೆಯ ಹತ್ತಿರದ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸುವ ಮೂಲಕ ಕಡ್ಡಾಯ ಮತದಾನ ಘೋಷಣೆಗಳ ಮೂಲಕ ಕರೆ ನೀಡಲಾಯಿತು. ಜಾಥಾದಲ್ಲಿ ಭಾಗವಹಿಸಿದ್ದ ಪ್ರತಿಯೊಬ್ಬರೂ ಕೈಯಲ್ಲಿ ಕಡ್ಡಾಯ ಮತದಾನದ ಘೋಷವಾಕ್ಯದ ಪ್ಲೇಕಾರ್ಡ್‌ಗಳನ್ನು ಹಿಡಿದು ಪಾಲ್ಗೊಂಡಿದ್ದು ಪ್ರೇರಣೆಯಾಗಿತ್ತು.

ತಪ್ಪದೇ ಮತ ನೀಡುವಂತೆ ಜಾಗೃತಿ ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.


ಜಾಗೃತಿ ಜಾಥಾದಲ್ಲಿ ಮತದಾನದ ಘೋಷಣೆಗಳನ್ನು ಕೂಗುತ್ತಾ ಕಡ್ಡಾಯವಾಗಿ ಮತ ಚಲಾಯಿಸುವಂತೆ ಜಾಗೃತಿ ಮೂಡಿಸಲಾಯಿತು. ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಜಾಥಾದಲ್ಲಿ ಮತದಾರರನ್ನು ಭೇಟಿ ಮಾಡಿ ಮತದಾನದ ಮಹತ್ವದ ಬಗ್ಗೆ ತಿಳುವಳಿಕೆ ಮೂಡಿಸಿದರು.

## 'ಮನೆ ಮನೆ ಮತದಾನ' ಕಾರ್ಯ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಗದಗ ಜಿಲ್ಲೆಯಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರರು ಹಾಗೂ ವಿಶೇಷಚೇತನ ಮತದಾರರ ಪೈಕಿ 12ಡಿ ಮುಖಾಂತರ ಈಗಾಗಲೇ ಅರ್ಜಿ ಸಲ್ಲಿಸಿದವರಿಗೆ ಮನೆಯಲ್ಲಿಯೇ ಮತದಾನ ಮಾಡುವ ಕಾರ್ಯಕ್ಕೆ ಶುಕ್ರವಾರ ಚಾಲನೆ ದೊರೆಯಿತು.

ನಗರದ ಹಲವು ವಾರ್ಡ್‌ಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಭೇಟಿ ನೀಡಿ, ಮನೆ ಮನೆ ಮತದಾನದ ಕಾರ್ಯದ ಬಗ್ಗೆ ಪರಿಶೀಲಿಸಿದರು. ಈಗಾಗಲೇ ಅರ್ಜಿ ಸಲ್ಲಿಸಿರುವ ಮತದಾರರು,



ತಾವು ನೀಡಿದ ವಿಳಾಸದ ಮನೆಯಲ್ಲಿಯೇ ಹಾಜರಿದ್ದು, ಮತ ಚಲಾಯಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಕೋರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯ ನಾಗರಿಕರು, ಮನೆ ಮನೆಯಲ್ಲಿಯೇ ಹಿರಿಯರಿಗೆ ಮತ ಚಲಾಯಿಸಲು ಅವಕಾಶ ಮಾಡಿರುವುದಕ್ಕೆ ಚುನಾವಣಾ ಆಯೋಗಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷಚೇತನರಿಗೆ ಮನೆಯಲ್ಲಿಯೇ ಮತ ಚಲಾಯಿಸಲು ಅವಕಾಶ ಮಾಡಿರುವುದರಿಂದ ಶೇಕಡವಾರು ಮತದಾನ ಹೆಚ್ಚಳ ಆಗುವುದರ ಜೊತೆಗೆ, ಪ್ರಜಾಪ್ರಭುತ್ವವನ್ನು ಬಲಪಡಿಸಲು ಸಹಕಾರಿ ಆಗಲಿದೆ. ಆ ನಿಟ್ಟಿನಲ್ಲಿ 'ಮನೆ ಮನೆ ಮತದಾನ' ಹಿರಿಯರಿಗೆ ಮತ್ತು ವಿಶೇಷಚೇತನರಿಗೆ ಒಂದು ಅವಕಾಶ ಎಂದು ಹಿರಿಯ ನಾಗರಿಕರೊಬ್ಬರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಉಪ ವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್, ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ ಇತರರು ಇದ್ದರು.

## ಇಬ್ಬರು ಕೊಲೆ ಆರೋಪಿಗಳಿಗೆ ಜೀವಾವಧಿ ಶಿಕ್ಷೆ

■ ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಎಸ್‌ಎಸ್‌ಕೆ ಶಿಕ್ಷಣ ಸಂಸ್ಥೆಯ ಸಮೀಪದಲ್ಲಿ ನಡೆದ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿತರಿಗೆ ಇಲ್ಲಿನ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ. 2021ರ ಜುಲೈ 17ರಂದು ಭೀಷ್ಮ ಕೆರೆ ಎದುರಿನ ಎಸ್‌ಎಸ್‌ಕೆ ಶಿಕ್ಷಣ ಸಂಸ್ಥೆಯ ತ್ರಿಶಕ್ತಿ ಮಲ್ಟಿ ಜಿಮ್ ಸಮೀಪದಲ್ಲಿ ಮುತ್ತು ಚಲವಾದಿ ಎನ್ನುವ ಯುವಕನನ್ನು ಫಕೀರೇಶ ಬಸವರಾಜ ಕೊರಿಶೆಟ್ಟರ್ ಮತ್ತು ಪವನ ಯಮನಪ್ಪ ಸಕ್ರಿ ಸೇರಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಭೀಕರವಾಗಿ ಕೊಲೆ ಮಾಡಿದ್ದರು.

ಈ ಬಗ್ಗೆ ಗದಗ ಶಹರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಪ್ರಕರಣದ ತನಿಖೆ ನಡೆಸಿದ ಡಿವೈಎಸ್ಪಿ ಶಿವಾನಂದ ಪವಾಡಶೆಟ್ಟಿ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ವೇಳೆ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಮೊದಲ ಆರೋಪಿ ಫಕೀರೇಶನಿಗೆ ಜೀವಾವಧಿ ಶಿಕ್ಷೆ ಹಾಗೂ ಒಟ್ಟು 3 ಲಕ್ಷ ರೂ. ದಂಡ, 2ನೆ ಆರೋಪಿ ಪವನಗೆ ಜೀವಾವಧಿ ಶಿಕ್ಷೆ ಹಾಗೂ 50 ಸಾವಿರ ರೂಪಾಯಿ ದಂಡ ವಿಧಿಸಿ ನ್ಯಾಯಾಧೀಶೆ ರಾಜೇಶ್ವರಿ ಶೆಟ್ಟಿ ಆದೇಶಿಸಿದ್ದಾರೆ. ಪ್ರಕರಣದಲ್ಲಿ ಸರಕಾರದ ಪರವಾಗಿ ಮಲ್ಲಿಕಾರ್ಜುನ ದೊಡ್ಡಗೌಡ್ರ ವಾದ ಮಂಡಿಸಿದ್ದರು.

# ಕರ್ತವ್ಯ ನಿರತ ಸಿಬ್ಬಂದಿಗಳ ಗೊಂದಲ ನಿವಾರಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

2024ರ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕರ್ತವ್ಯ ನಿರತ ಸಿಬ್ಬಂದಿಗಳಿಗೆ ಬಂದಿರುವ ಆದೇಶ ಇಡಿಸಿ ಹಾಗೂ ಪೋಸ್ಟಲ್ ಬ್ಯಾಲೆಟ್ ಕುರಿತ ಉದ್ಭವಾಗಿರುವ ಗೊಂದಲಗಳನ್ನು ನಿವಾರಿಸುವಂತೆ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜೀಕರ ನೇತೃತ್ವದ ನಿಯೋಗ ಶುಕ್ರವಾರ ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರನ್ನ ಭೇಟಿ ಮಾಡಿ ವಿನಂತಿಸಿದರು.

ಈ ಬಗ್ಗೆ ಪ್ರತಿಕ್ರಿಯಿಸಿರುವ ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಇಡಿಸಿ ಹಾಗೂ ಪೋಸ್ಟಲ್ ಬ್ಯಾಲೆಟ್ ಕುರಿತು ಗೊಂದಲಗಳನ್ನು ಬಗೆಹರಿಸಲು ಶನಿವಾರದಿಂದಲೇ ಗದಗ ಜಿಲ್ಲಾಡಳಿತ ಭವನದಲ್ಲಿ ಎಲ್ಲಾ ಕ್ಷೇತ್ರಗಳ ಸಿಬ್ಬಂದಿಗಳ ಇ.ಡಿ.ಸಿ ಹಾಗೂ ಪೋಸ್ಟಲ್ ಬ್ಯಾಲೆಟ್ ಪಡೆಯುವ ಕೇಂದ್ರಗಳನ್ನು ತೆರೆಯುವ



ಭರವಸೆಯನ್ನು ನೀಡಿದರು.

ರವಿ ಗುಂಜೀಕರ ಮಾತನಾಡಿ, ಲೋಕಸಭಾ ಚುನಾವಣೆಯಲ್ಲಿ ಕರ್ತವ್ಯ ನಿರತರಾದ ನೌಕರ ಬಾಂಧವರು ತಮ್ಮ ಸಮಸ್ಯೆ ಕುರಿತು ಕೇಂದ್ರಕ್ಕೆ ಸಂಪರ್ಕಿಸಿ ಚುನಾವಣಾ ಕಾರ್ಯವನ್ನು ಯಶಸ್ವಿಗೊಳಿಸಲು ಕರೆ ನೀಡಿದರು. ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಎಸ್. ಆರ್. ಬಂಡಿ, ಹಿರೇಮಠ ಸೇರಿದಂತೆ ಹಲವರಿದ್ದರು.

## ಸಂಪಾದಕೀಯ

# ದೀಪದ ಕೆಳಗೆ ಕತ್ತಲೆ

ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನ ಪ್ರಕ್ರಿಯೆ ಪೂರ್ಣಗೊಂಡಿದೆ. ಕರ್ನಾಟಕದ 28 ಕ್ಷೇತ್ರಗಳ ಪೈಕಿ 14 ಕ್ಷೇತ್ರಗಳಿಗೆ ಮತದಾನ ನಡೆಯಿತು. ಮತದಾನ ಪ್ರಮಾಣ ನೋಡಿದರೆ ದೀಪದ ಕೆಳಗೆ ಕತ್ತಲೆ ಎನ್ನುವುದು ಮತ್ತೊಮ್ಮೆ ಸಾಬೀತ ಾಗಿದೆ.

ದೀಪದ ಕೆಳಗೆ ಕತ್ತಲೆ ಎಂದರೆ ರಾಜಧಾನಿ ಬೆಂಗಳೂರಿನ ಮತದಾನ ಪ್ರಮಾಣ. 14 ಕ್ಷೇತ್ರಗಳ ಮತದಾನ ಪ್ರಮಾಣಕ್ಕೆ ಹೋಲಿಕೆ ಮಾಡಿದರೆ ರಾಜಧಾನಿ ಬೆಂಗಳೂರಿನ ಎರಡು ಲೋಕಸಭಾ ಕ್ಷೇತ್ರಗಳು ಶೇಕಡ 50ರಷ್ಟು ಮತದಾನ ಆಗಿಲ್ಲ.

12 ಲೋಕಸಭೆ ಕ್ಷೇತ್ರಗಳ ಮತದಾನ ಪ್ರಮಾಣ ಸರಾಸರಿ ಶೇಕಡ 70ಕ್ಕಿಂತ ಹೆಚ್ಚಿದೆ. ಮಂಡ್ಯ ಜಿಲ್ಲೆಯಲ್ಲಿ 74% ಮತದಾನವಾಗಿದೆ. ಆದರೆ ಬೆಂಗಳೂರು ನಗರದ ಎರಡು ಲೋಕಸಭಾ ಕ್ಷೇತ್ರಗಳ ಮತದಾನ ಪ್ರಮಾಣ ಶೇ. 50ಕ್ಕಿಂತ ಕಡಿಮೆ ಇದೆ. ಅದೇ ಬೆಂಗಳೂರು ಗ್ರಾಮೀಣ ಲೋಕಸಭಾ ಕ್ಷೇತ್ರಕ್ಕೆ ಹೋಲಿಕೆ ಮಾಡಿದರೆ ಅಲ್ಲಿ ಶೇಕಡ 61% ರಷ್ಟು ಮತದಾನವಾಗಿದೆ.

ಲೋಕಸಭೆ ಚುನಾವಣೆ ಎನ್ನುವುದು ಪ್ರಜಾಜಾಪ್ರಭುತ್ವದ ಬಹುದೊಡ್ಡ ಹಬ್ಬ. ಕಡ್ಡಾಯ ಮತದಾನಕ್ಕಾಗಿ ಚುನಾವಣಾ ಆಯೋಗ ಎಷ್ಟೆಲ್ಲಾ ಜನಜಾಗೃತಿ ಮಾಡಿದರು ಸಹ, ರಾಜ್ಯದ ರಾಜಧಾನಿಯ ಪ್ರಜ್ಞಾವಂತ ನಾಗರಿಕರು ಮತಗಟ್ಟೆಗಳತ್ತ ಮುಖ ಮಾಡುತ್ತಿಲ್ಲ.

ಪ್ರಜಾಪ್ರಭುತ್ವ ಬಲಗೊಳ್ಳಬೇಕಾದರೆ ಜನ ತಪ್ಪದೇ ಮತದಾನ ಮಾಡಬೇಕು. ಪ್ರಜ್ಞಾವಂತರು, ಸಾಕ್ಷರರು ಮತದಾನದಿಂದ ತಪ್ಪಿಸಿಕೊಳ್ಳಬಾರದು. ಆದರೆ ಸದ್ಯದ ಪರಿಸ್ಥಿತಿ ನೋಡಿದರೆ, ಗ್ರಾಮೀಣ ಭಾಗದ ಜನ ಅತಿ ಹೆಚ್ಚು ಆಸಕ್ತಿಯಿಂದ ಈ ಮತದಾನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ.

ಐಟಿ ಬಿಟಿ ಸಿಟಿ ಎಂದೆಲ್ಲ ಕರೆಸಿಕೊಳ್ಳುವ ಬೆಂಗಳೂರಿನ ಈ ದುಸ್ಥಿತಿ ಭವಿಷ್ಯದ ಇನ್ನುಳಿದ ಲೋಕಸಭಾ ಕ್ಷೇತ್ರಗಳಲ್ಲಿ ಭಾರದಿರಲಿ. ಕಡ್ಡಾಯ ಮತದಾನ ನಮ್ಮೆಲ್ಲರ ಜವಾಬ್ದಾರಿ ಆಗಲಿ.

## 'ನೋಟಾ'ಗೆ ಹೆಚ್ಚು ಮತ ಬಂದರೆ ಮುಂದೇನು?

# ಚುನಾವಣಾ ಆಯೋಗಕ್ಕೆ ಸುಪ್ರೀಂ ಕೋರ್ಟ್ ನೋಟಿಸ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅಭ್ಯರ್ಥಿ ಪಡೆದಿರುವುದಕ್ಕಿಂತ ಹೆಚ್ಚು ಮತಗಳು ನೋಟಾಗೆ ಚಲಾವಣೆಯಾದರೆ, ಅಂತಹ ಕ್ಷೇತ್ರಗಳ ಚುನಾವಣೆಯನ್ನು 'ಅನೂರ್ಜಿತ' ಎಂದು ಘೋಷಿಸಿ, ಮರು ಮತದಾನ ನಡೆಸಲು ನಿರ್ದೇಶನ ನೀಡುವಂತೆ ಕೋರಿರುವ ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಶುಕ್ರವಾರ (ಏ.26) ಚುನಾವಣಾ ಆಯೋಗಕ್ಕೆ ನೋಟಿಸ್ ಜಾರಿ ಮಾಡಿದೆ.



ನೋಟಾಗಿಂತ ಕಡಿಮೆ ಮತ ಪಡೆದ ಅಭ್ಯರ್ಥಿ ಮತ್ತೆ ಚುನಾವಣೆಗೆ ಸ್ಪರ್ಧಿಸುವುದಕ್ಕೆ ನಿರ್ಬಂಧ ಹೇರಬೇಕು. ನೋಟಾವನ್ನು "ಕಾಲ್ಪನಿಕ ಅಭ್ಯರ್ಥಿ" ಎಂದು ಸರಿಯಾಗಿ ಪ್ರಚಾರ ಮಾಡಬೇಕು. ಈ ನಿಟ್ಟಿನಲ್ಲಿ ಸೂಕ್ತ ನಿಯಮಗಳನ್ನು ರೂಪಿಸಲು ಭಾರತೀಯ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್, ನ್ಯಾಯಮೂರ್ತಿ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠವು, ಶಿವ ಖೇರಾ ಎಂಬವರು ಸಲ್ಲಿಸಿರುವ ಅರ್ಜಿಯ ವಿಚಾರಣೆಗೆ ಒಪ್ಪಿಕೊಂಡಿದೆ.

ಪೀಪಲ್ಸ್ ಯೂನಿಯನ್ ಫಾರ್ ಸಿವಿಲ್ ಲಿಬರ್ಟೀಸ್ (ಪಿಯುಸಿಎಲ್) ಸಲ್ಲಿಸಿದ್ದ ಪಿಐಎಲ್‌ಗೆ ಸಂಬಂಧಿಸಿದಂತೆ 2013ರಲ್ಲಿ ಸುಪ್ರೀಂ ಕೋರ್ಟ್ ನೀಡಿದ ನಿರ್ದೇಶನದ ಅನುಸಾರ ವಿದ್ಯುನ್ಮಾನ ಮತಯಂತ್ರಗಳಲ್ಲಿ (ಇವಿಎಂ) ನೋಟಾ ಪರಿಚಯಿಸಲಾಯಿತು. ಎಲ್ಲಾ ಅಭ್ಯರ್ಥಿಗಳು ಅತೃಪ್ತಿಕರ ಎಂದು ತಿರಸ್ಕರಿಸಲು ಮತದಾರರಿಗೆ ನೋಟಾ ಆಯ್ಕೆಯನ್ನು ನೀಡುತ್ತದೆ. ಈಗಿರುವ ನಿಯಮಗಳ ಪ್ರಕಾರ ಅಭ್ಯರ್ಥಿಗಿಂತ ಹೆಚ್ಚು ಮತಗಳು ನೋಟಾಗೆ ಚಲಾವಣೆಯಾದರೆ, ನೋಟಾದ ಬಳಿಕ ಹೆಚ್ಚು ಮತಗಳನ್ನು ಪಡೆದ ಅಭ್ಯರ್ಥಿಯನ್ನೇ ವಿಜೇತ ಎಂದು ಘೋಷಿಸಲಾಗ್ತಿದೆ.

ಅರ್ಜಿದಾರರ ಪರ ವಾದ ಮಂಡಿಸಿದ ಹಿರಿಯ ವಕೀಲ ಗೋಪಾಲ್ ಶಂಕರನಾರಾಯಣ್ ಅವರು, ಸೂರತ್ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ನಾಮಪತ್ರ ತಿರಸ್ಕೃತಗೊಂಡು ಇತರೆ ಅಭ್ಯರ್ಥಿಗಳು ನಾಮಪತ್ರ ಹಿಂಪಡೆದ ಕಾರಣ ಯಾವುದೇ ಚುನಾವಣೆಯಿಲ್ಲದೆ ಬಿಜೆಪಿ ಅಭ್ಯರ್ಥಿ ವಿಜಯಿ ಎಂದು ಘೋಷಿಸಿದ ಇತ್ತೀಚಿನ ಉದಾಹರಣೆಯನ್ನು ನ್ಯಾಯಾಲಯದ ಮುಂದೆ ಉಲ್ಲೇಖಿಸಿದ್ದಾರೆ.

ಒಬ್ಬರೇ ಅಭ್ಯರ್ಥಿ ಇದ್ದರೂ, ಮತದಾರರಿಗೆ ನೋಟಾಕ್ಕೆ ಮತ ಹಾಕುವ ಅವಕಾಶವಿರುವುದರಿಂದ ಚುನಾವಣೆ ನಡೆಯಬೇಕು. ಅವಿರೋಧ ಆಯ್ಕೆ ಎಂಬುವುದು ಪ್ರತಿಸ್ಪರ್ಧಿ ಇಲ್ಲ ಎಂಬ ಕಾರಣಕ್ಕೆ ಯಾರೇ ಅಭ್ಯರ್ಥಿಯಾದರೂ ಅವರು ಒಪ್ಪಿಕೊಳ್ಳುವಂತೆ ಮತದಾರರನ್ನು ಬಲವಂತಪಡಿಸುವುದಾಗಿದೆ ಎಂದು ವಕೀಲ ಹೇಳಿದ್ದಾರೆ.

ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನಿಂದ ಕಾನೂನನ್ನು ಇನ್ನಷ್ಟು ಅಭಿವೃದ್ಧಿಪಡಿಸಲು ಅರ್ಜಿದಾರರು ಬಯಸುತ್ತಿರುವುದನ್ನು ಗಮನಿಸಿದ ಸಿಜೆಐ ಚಂದ್ರಚೂಡ್ ಅವರು ಈ ವಿಷಯವನ್ನು ಪರಿಗಣಿಸಲು ಒಪ್ಪಿಕೊಂಡಿದ್ದಾರೆ. ಚುನಾವಣಾ ಆಯೋಗ ಏನು ಹೇಳುತ್ತದೆ ನೋಡೋಣ ಎಂದು ಸಿಜೆಐ ಪ್ರತಿಕ್ರಿಯಿಸಿದ್ದಾರೆ.

## ನೇಹಾ ಹಿರೇಮಠ ಹಂತಕನಿಗೆ ಗಲ್ಲು ಶಿಕ್ಷೆ ವಿಧಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಬಿವಿಬಿ ಕಾಲೇಜು ವಿದ್ಯಾರ್ಥಿನಿ ನೇಹಾ ಹಿರೇಮಠಳನ್ನು ಹಾಡುಹಗಲೇ ಕಾಲೇಜ್ ಕ್ಯಾಂಪಸ್‌ನಲ್ಲಿ ಚಾಕುವಿನಿಂದ ಚುಚ್ಚಿ ಬರ್ಬರವಾಗಿ ಹತ್ಯೆ ಮಾಡಿದ ಆರೋಪಿ ಫಯಾಜ್‌ಗೆ ಕೂಡಲೇ ಗಲ್ಲು ಶಿಕ್ಷೆ ವಿಧಿಸಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಯುವ ಮುಖಂಡ ನಿಂಗನಗೌಡ ಮಾಲಿಪಾಟೀಲ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು ಕೊಲೆಗಳು, ದರೋಡೆಗಳು, ಹಲ್ಲೆಗಳಂತಹ ಘಟನೆಗಳು ನಿರಂತರವಾಗಿ ನಡೆಯುತ್ತಿದೆ. ರಾಜ್ಯದಲ್ಲಿ ಮತ್ತೆ ಇಂತಹ ದುರ್ಘಟನೆ ಆಗದಂತೆ ಕ್ರಮ ಕೈಗೊಳ್ಳಬೇಕೆಂದು ಅವರು ಆಗ್ರಹಿಸಿದ್ದಾರೆ.



ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರು ಶುಕ್ರವಾರ ಗಜೇಂದ್ರಗಡ ಪಟ್ಟಣದಲ್ಲಿ ಕೂಡಲಸಂಗಮ ಪಂಚಮಸಾಲಿ ಪೀಠದ ಶ್ರೀಜಗದ್ಗುರು ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳ ಆಶೀರ್ವಾದ ಪಡೆದರು. ಈ ವೇಳೆ ಶಾಸಕ ಜಿ.ಎಸ್.ಪಾಟೀಲ ಮತ್ತಿತರ ಗಣ್ಯರು ಇದ್ದರು.



ಗದುಗಿನ ವೈದ್ಯರಾದ ಡಾ. ರಾಜಶೇಖರ ಬಳ್ಳಾರಿ ಅವರ ನಿವಾಸ ಇಂಚರಾಕ್ಕೆ ಭೇಟಿ ನೀಡಿದ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಭಾರತೀಯ ವೈದ್ಯಕೀಯ ಸಂಘದ (ರಿ) ಆರೋಗ್ಯ ಪ್ರಣಾಳಿಕೆ –2024 ನೀಡಲಾಯಿತು. ಡಾ.ಆರ್.ಎನ್.ಗೋಡಬೋಲೆ, ಡಾ.ಜಿ.ಎಸ್.ಪಲ್ಲೇದ್, ಡಾ.ಚಂದ್ರಶೇಖರ ಬಳ್ಳಾರಿ ಇದ್ದರು.

## 100 ಕೋಟಿ ದಾಟಿದ ಬಿಜೆಪಿಯ ಗೂಗಲ್ ಜಾಹೀರಾತು ವೆಚ್ಚ!; ಕರ್ನಾಟಕವೇ ಪ್ರಮುಖ ಟಾರ್ಗೆಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೇಶದಲ್ಲಿ ಗೂಗಲ್ ಮತ್ತು ಯೂಟ್ಯೂಬ್‌ನಲ್ಲಿ ರಾಜಕೀಯ ಜಾಹೀರಾತಿಗೆ ಅತಿ ಹೆಚ್ಚು ವೆಚ್ಚಗೊಳಿಸಿರುವುದು ಬಹಿರಂಗವಾಗಿದೆ. ಸರ್ಚ್ ಇಂಜಿನ್ ಗೂಗಲ್ ಮತ್ತು ಅದರ ವಿಡಿಯೋ ಪ್ಲಾಟ್‌ಫಾರ್ಮ್ ಯೂಟ್ಯೂಬ್‌ನಲ್ಲಿ ಬಿಜೆಪಿಯ ರಾಜಕೀಯ ಜಾಹೀರಾತುಗಳ ವೆಚ್ಚ 100 ಕೋಟಿ ರೂಪಾಯಿಗಳನ್ನು ದಾಟಿದೆ. ಇಷ್ಟೊಂದು ವೆಚ್ಚದಲ್ಲಿ ಗೂಗಲ್‌ನಲ್ಲಿ ಭಾರತದ ಯಾವುದೇ ರಾಜಕೀಯ ಪಕ್ಷ ಜಾಹೀರಾತು ನೀಡಿಲ್ಲ ಎನ್ನುವುದು ಇದೀಗ ಬಹಿಂಗವಾಗಿದೆ.

## ಪುತ್ತೂರು । ಮತಗಟ್ಟೆಯೊಳಗೆ ಮೊಬೈಲ್ ತೆಗೆದುಕೊಂಡು ಹೋದ ಯುವಕ: ಪ್ರಕರಣ ದಾಖಲು

■ವಿಜಯಸಾಕ್ಷಿ ಸುದ್ದಿ, ಪುತ್ತೂರು

ಮತದಾನ ಮಾಡಲು ಮತಗಟ್ಟೆಗೆ ತೆರಳಿದಾಗ ಮತದಾರರು ಮೊಬೈಲ್ ತೆಗೆದುಕೊಂಡು ಹೋಗದಂತೆ ಚುನಾವಣಾ ಆಯೋಗ ಸೂಚನೆ ನೀಡಿದೆ. ಆದರೂ, ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಮತಗಟ್ಟೆಯೊಳಗೆ ಯುವಕನೊಬ್ಬ ಮೊಬೈಲ್ ತೆಗೆದುಕೊಂಡು ಹೋಗಿ ಫೋಟೋ ಕ್ಲಿಕ್ಕಿಸಿರುವ ಘಟನೆ ನಡೆದಿದೆ.




ರಂಜಿತ್ ಬಂಗೇರ ಎಂಬ ಯುವಕ ಕಾಂಗ್ರೆಸ್ ಅಭ್ಯರ್ಥಿಗೆ ಮತ ಹಾಕುವ ಫೋಟೋ ತೆಗೆದು ಪುತ್ತೂರಿನ ಕೋಟಿ–ಚೆನ್ನಯ ಕಂಬಳ ವಾಟ್ಸಾಪ್ ಗ್ರೂಪ್‌ಗೆ ಶೇರ್ ಮಾಡಿದ್ದಾನೆ.

ಈ ಫೋಟೋ ನೋಡಿದ ಕೆಲವರು ಕೂಡಲೇ ಪೊಲೀಸರಿಗೆ ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಸದ್ಯ ರಂಜಿತ್ ವಿರುದ್ಧ ಪುತ್ತೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಬಡವರ ಆರ್ಥಿಕತೆಗೆ ಬಲ ತುಂಬುವ ಕೆಲಸ ಮೋದಿಯಿಂದ ಆಗಿಲ್ಲ: ಸಿಎಂ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ವಿಜಯಪುರ

ಕಳೆದ ಹತ್ತು ವರ್ಷದಿಂದ ದೇಶದ ಪ್ರಧಾನಿಯಾಗಿರುವ ಮೋದಿ ಬಡವರ ಆರ್ಥಿಕತೆಗೆ ಬಲ ತುಂಬುವ ಕೆಲಸ ಮಾಡಿಲ್ಲ. ಅಧಿಕಾರ ಹಿಡಿದ ನಂತರ ಎಂದೂ ಬೆಲೆ ಏರಿಕೆ, ನಿರುದ್ಯೋಗ, ರೈತರ ಸಮಸ್ಯೆಗಳ ಕುರಿತು ಚರ್ಚೆ ಮಾಡಿಲ್ಲ. ಈಗ ಸೋಲಿನ ಭಯದಲ್ಲಿ ಹತಾಷೆಯಿಂದ ದ್ವೇಷದ ಭಾಷಣ ಮಾಡುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ಮಾಡಿದರು. ವಿಜಯಪುರದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ಆಗಮಿಸಿದ್ದ ಪ್ರಚಾರ ಸಭೆಯಲ್ಲಿ ಪಾಲ್ಗೊಂಡ ಅವರು ಮಾತನಾಡಿದರು.



ಈ ಚುನಾವಣೆ ಬಹಳ ಮಹತ್ವವನ್ನು ಪಡೆದುಕೊಂಡಿದೆ. ಜನರ ತೀರ್ಪು ಯಾವ ಪಕ್ಷ ಅಧಿಕಾರದಲ್ಲಿ ಇರಬೇಕು ಅನ್ನೋದನ್ನು ತೀರ್ಮಾನಿಸಲಿದೆ. ಹೀಗಾಗಿ ಅಭಿವೃದ್ಧಿ, ಬಡವರ ಪರವಾಗಿರುವ ಕಾಂಗ್ರೆಸ್ ಪಕ್ಷವನ್ನು ಈ ಬಾರಿ ಜನ ಬೆಂಬಲಿಸಲಿದ್ದಾರೆ ಎಂದು ನನಗೆ ನಂಬಿಕೆ ಇದೆ ಎಂದಿದ್ದಾರೆ.

## ಮನೆಯಿಂದಲೇ ಮತ ಚಾಲಾಯಿಸಿದ ಹಿರಿಯ ನಾಗರಿಕರು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತ ಚುನಾವಣಾ ಆಯೋಗದ ಎಲ್ಲರೂ ಒಳಗೊಳ್ಳುವಿಕೆ ಆಶಯದಂತೆ ಮತ್ತಿ ಮತದಾನ ಹಕ್ಕು ಪಡೆದಿರುವ ಅರ್ಹರು ಮತದಾನದಿಂದ ಹೊರಗುಳಿಯದಂತೆ ಜಾಗೃತಿ ವಹಿಸಲು ಪ್ರಜಾಪ್ರಭುತ್ವದಲ್ಲಿ ಮತದಾನದ ವಿನೂತನ ಕ್ರಮವಾದ ಮನೆಯಿಂದಲೇ ಮತದಾನ ಪ್ರಕ್ರಿಯೆ ಗುರುವಾರ ಬೆಳಿಗ್ಗೆ 7 ಗಂಟೆಯಿಂದ ಜಿಲ್ಲೆಯಲ್ಲಿ ಆರಂಭವಾಗಿದ್ದು, ನೋಂದಾಯಿತ ಹಿರಿಯ ನಾಗರಿಕರು ಹಾಗೂ ವಿಕಲಚೇತನರು ಖುಷಿಯಿಂದ ತಮ್ಮ ಮನೆಯಿಂದಲೇ ತಮ್ಮ ಮತದಾನದ ಹಕ್ಕು ಚಲಾಯಿಸಿ, ಜಿಲ್ಲಾಡಳಿತಕ್ಕೆ, ಚುನಾವಣಾ ಆಯೋಗಕ್ಕೆ ಧನ್ಯತೆ ಅರ್ಪಿಸಿದರು.




ಧಾರವಾಡ ನಗರದ ಕಮಲಾಪುರ, ಮಾಳಾಪುರ, ಸಾಧನಕೇರಿ, ದೊಡ್ಡನಾಯ ಕನಕೊಪ್ಪ, ಸಾರಸ್ವತಪುರ ಪ್ರದೇಶಗಳಿಗೆ ಬೆಳಿಗ್ಗೆಯಿಂದ ಧಾರವಾಡ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹಿರಿಯ ನಾಗರಿಕರ ಹಾಗೂ ವಿಕಲಚೇತನರ ಮನೆಗಳಿಗೆ ಖುದ್ದು ಭೇಟಿ ನೀಡಿ, ಮತದಾನ ಪ್ರಕ್ರಿಯೆ ಪರಿಶೀಲಿಸಿದರು.

ಧಾರವಾಡ ಲೋಕಸಭಾ ವ್ಯಾಪ್ತಿಯಲ್ಲಿ ಮನೆಯಿಂದಲೇ ಮತದಾನಕ್ಕೆ ನೋಂದಾಯಿಸಿಕೊಂಡಿರುವ 1853 ಮತದಾರರಿಂದ ಮತದಾನ ಪಡೆಯಲು ಸೆಕ್ಟರ್ ಆಫೀಸರ್ ನೇತೃತ್ವದಲ್ಲಿ 102 ತಂಡಗಳನ್ನು ರಚಿಸಲಾಗಿದೆ. ಪ್ರತಿ ತಂಡದಲ್ಲಿ ಪಿ.ಆರ್.ಓ, ಪೊಲೀಸ್ ಸೇರಿ 5 ಜನ ಸಿಬ್ಬಂದಿಗಳಿದ್ದಾರೆ. ಗುರುವಾರ ಮತ್ತು ಶುಕ್ರವಾರ ಬೆಳಿಗ್ಗೆ 7ರಿಂದ ಸಂಜೆ 6 ಗಂಟೆಯವರೆಗೆ ನೋಂದಾಯಿತ 85 ವರ್ಷ ಮೇಲ್ಪಟ್ಟ ಹಾಗೂ ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವ ವಿಕಲಚೇತನರ ಮನೆಗಳಿಗೆ ತೆರಳಿ ಮತದಾನ ಪ್ರಕ್ರಿಯೆ ನಡೆಸುತ್ತಿದ್ದಾರೆ ಎಂದು ಅವರು ತಿಳಿಸಿದರು.

## ಚಿಕ್ಕಬಳ್ಳಾಪುರದಲ್ಲಿ 4.8 ಕೋಟಿ ನಗದು ವಶ: ಬಿಜೆಪಿ ಅಭ್ಯರ್ಥಿ ಡಾ. ಕೆ.ಸುಧಾಕರ್ ವಿರುದ್ಧ ಪ್ರಕರಣ ದಾಖಲು

■ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ



ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಫ್‌ಎಸ್‌ಟಿ ಅಧಿಕಾರಿಗಳು 4.8 ಕೋಟಿ ನಗದು ವಶಪಡಿಸಿಕೊಂಡಿದ್ದು, ಈ ಕುರಿತು ಚಿಕ್ಕಬಳ್ಳಾಪುರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಕೆ.ಸುಧಾಕರ್ ವಿರುದ್ಧ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಡಾ.ಕೆ. ಸುಧಾಕರ್ ವಿರುದ್ಧ ಎಫ್‌ಐಆರ್ ದಾಖಲಿಸಿರುವ ಬಗ್ಗೆ ಚುನಾವಣಾ ಆಯೋಗ ಎಕ್ಸ್‌ನ ಅಧಿಕೃತ ಖಾತೆಯಲ್ಲಿ ಮಾಹಿತಿಯನ್ನು ನೀಡಿದೆ. ಚಿಕ್ಕಬಳ್ಳಾಪುರದ ಎಫ್‌ಎಸ್‌ಟಿ (ಫ್ಲೈಯಿಂಗ್ ಸರ್ವೆಲೆನ್ಸ್ ತಂಡ) 4.8 ಕೋಟಿ ಮೌಲ್ಯದ ನಗದನ್ನು ವಶಪಡಿಸಿಕೊಂಡಿದೆ. ಚಿಕ್ಕಬಳ್ಳಾಪುರ ಕ್ಷೇತ್ರದ ಎಸ್‌ಎಸ್‌ಟಿ ತಂಡವು ಬಿಜೆಪಿ ಅಭ್ಯರ್ಥಿ ಕೆ ಸುಧಾಕರ್ ವಿರುದ್ಧ 25.04.2024ರಂದು ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದೆ ಎಂದು ಮಾಹಿತಿಯಲ್ಲಿ ತಿಳಿಸಿದೆ.

ನಿನ್ನೆ ಸುಧಾಕರ್ ಆಪ್ತ ಗೋವಿಂದಪ್ಪ ಎಂಬವರ ಮನೆಯಲ್ಲಿ ಭಾರಿ ಮೊತ್ತದ ನಗದು ವಶಪಡಿಸಿಕೊಳ್ಳಲಾಗಿದ್ದು, ಗೋವಿಂದಪ್ಪ ಅವರನ್ನು ವಿಚಾರಣೆಗೆ ಗುರಿಪಡಿಸಿದ ಬಳಿಕ ಚಿಕ್ಕಬಳ್ಳಾಪುರ ಬಿಜೆಪಿ ಅಭ್ಯರ್ಥಿ ಡಾ. ಕೆ. ಸುಧಾಕರ್ ವಿರುದ್ಧ ಮತದಾರರಿಗೆ ಆಮಿಷ ಹಾಗೂ ಅನಗತ್ಯ ಪ್ರಭಾವದ ಆರೋಪದ ಮೇಲೆ ಚುನಾವಣಾ ಆಯೋಗ ಪ್ರಕರಣ ದಾಖಲಿಸಿದೆ. ಗೋವಿಂದಪ್ಪ ವಿಚಾರಣೆಯ ವೇಳೆ ನೀಡಿದ ಮಾಹಿತಿ ಆಧಾರದಲ್ಲಿ ಪ್ರಕರಣ ದಾಖಲಿಸಲಾಗಿದೆ. ಈ ಘಟನೆಯ ಬೆನ್ನಲ್ಲೇ ಆದಾಯ ತೆರಿಗೆ ಅಧಿಕಾರಿಗಳು ಧಾವಿಸಿದ್ದು, ತನಿಖೆ ನಡೆಸುತ್ತಿದ್ದಾರೆ. ರಾಜ್ಯದಲ್ಲಿನ 28 ಲೋಕಸಭಾ ಕ್ಷೇತ್ರಗಳಿಗೆ ಎರಡು ಹಂತಗಳಲ್ಲಿ ಅಂದರೆ ಏಪ್ರಿಲ್ 26 ಮತ್ತು ಮೇ 7ರಂದು ಚುನಾವಣೆ ನಡೆಯುತ್ತಿದೆ. ಇಂದು 14 ಕ್ಷೇತ್ರಗಳಿಗೆ ಮತದಾನ ನಡೆಯುತ್ತಿದೆ.

## ಎಸ್‌ಡಿಪಿಐ ಗದಗ ಜಿಲ್ಲಾ ಸಮಿತಿ ಸಭೆ




■ವಿಜಯಸಾಕ್ಷಿ ಸುದ್ದಿ, ಗದಗ


ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಗದಗ ಜಿಲ್ಲಾ ಸಮಿತಿ ಸಭೆಯು ಜಿಲ್ಲಾ ಕಛೇರಿಯಲ್ಲಿ ಇತ್ತೀಚೆಗೆ ಜರುಗಿತು.

ರಾಜ್ಯ ಪ್ರಧಾನ ಕಾರ್ಯದರ್ಶಿ ಅಫ್ಸರ್ ಕೊಡ್ಲಿಪೇಟೆ ಹಾಗೂ ಜಿಲ್ಲಾ ಉಸ್ತುವಾರಿ ರಂಜಾನ್ ಕಡಿವಾಳರ ಉಪಸ್ಥಿತಿಯಲ್ಲಿ ನಡೆದ ಸಭೆ ಮತ್ತು ಕಾರ್ಯಕರ್ತರೊಂದಿಗೆ ನಡೆಸಿದ ಸಂವಾದದಲ್ಲಿ, ಹಾವೇರಿ–ಗದಗ ಲೋಕಸಭಾ ಕ್ಷೇತ್ರದಲ್ಲಿ ಯಾವ ಅಭ್ಯರ್ಥಿಯನ್ನು ಬೆಂಬಲಿಸಬೇಕೆಂಬ ಬಗ್ಗೆ ಸಮಿತಿಯ ನಿಲುವಿನ ಕುರಿತು ಕಾರ್ಯಕರ್ತರ ಅಭಿಪ್ರಾಯವನ್ನು ಸಂಗ್ರಹಿಸಲಾಯಿತು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಫ್ಸರ್ ಕೊಡ್ಲಿಪೇಟೆ, ಇದುವರೆಗೆ ಆಯ್ಕೆಯಾದ ಜನಪ್ರತಿನಿಧಿಗಳು ಬಂದ ಅನುದಾನ ಖರ್ಚು ಮಾಡಿದ್ದಾರೆಯೇ ಹೊರತು ಹೊಸ ಯೋಜನೆಗಳನ್ನು ತರಲು ಪ್ರಾಮಾಣಿಕ ಪ್ರಯತ್ನ ಮಾಡಿಲ್ಲ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾಧ್ಯಕ್ಷರಾದ ಬಿಲಾಲ್, ಜಿಲ್ಲಾ ಉಸ್ತುವಾರಿ ಮತ್ತು ರಾಜ್ಯ ಸಮಿತಿ ಸದಸ್ಯ ರಂಜಾನ್ ಕಡಿವಾಳ್, ಮಾತನಾಡಿ, ಮುಂದಿನ ದಿನಗಳಲ್ಲಿ ಗುಲಾಮಿ ರಾಜಕೀಯದಿಂದ ಮುಕ್ತಿ ಪಡೆಯಲು, ಘನತೆಯ ರಾಜಕೀಯಕ್ಕಾಗಿ ಎಎಸ್‌ಡಿಪಿಐ ಪಕ್ಷವನ್ನು ಬಲಪಡಿಸುವ ಅವಶ್ಯಕತೆ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಘಟನಾ ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ, ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ್, ಕಾರ್ಯದರ್ಶಿ ಇರ್ಫಾನ್ ಗುಲಗುಂದಿ, ಖಜಾಂಚಿ ಮುಜಾಹಿದ್ ಕಣಕೇನ್ನವರ್, ಜಿಲ್ಲಾ ಸದಸ್ಯರಾದ ಹಸ್ಸನ ನಾಗನೂರ್, ಅಬ್ದುಲ್, ಅನ್ವರ್ ಮುಲ್ಲಾ, ಮುಸ್ತಾಕ್ ಸಾಬ್ ಹೊಸಮನಿ, ವಾರ್ಡಿನ ಅಧ್ಯಕ್ಷರು, ಕಾರ್ಯದರ್ಶಿಗಳು ಮುಂತಾದವರಿದ್ದರು.



ಕಾಗಿನೆಲೆ ಕನಕ ಗುರುಪೀಠದ ಶ್ರೀನಿರಂಜನಾನಂದಪುರಿ ಮಹಾಸ್ವಾಮಿಗಳ ಜನ್ಮದಿನ ನಿಮಿತ್ತ ಹರಿಹರ ತಾಲೂಕಿನ ಬೆಳ್ಳೂಡಿಯಲ್ಲಿ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಶ್ರೀಗಳಿಗೆ ಶುಭಾಶಯ ಕೋರಿ ಆಶೀರ್ವಾದ ಪಡೆದರು. ಈ ವೇಳೆ ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್ ಗಾಜಿಗೌಡ್ರ ಉಪಸ್ಥಿತರಿದ್ದರು.

### ಸಂಸ್ಕೃತಿ-ಸಂಸ್ಕಾರ ಶಿಬಿರ ಸಮಾರೋಪ ಸಮಾರಂಭದಲ್ಲಿ ಸಂಗಮೇಶ್ವರ ಶ್ರೀಗಳು

# ವಿದ್ಯಾರ್ಥಿಗಳು ಪ್ರಜ್ಞಾವಂತರೂ ಆಗಬೇಕು

■ **ವಿಜಯಸಾಕ್ಷಿ ಸುದ್ದಿ, ಗದಗ**

ಇಂದು ವಿದ್ಯಾರ್ಥಿಗಳು ಹೆಚ್ಚು ವಿದ್ಯಾವಂತರಾಗಿರುವದನ್ನು ಗಮನಿಸಿದರೆ ಹೆಮ್ಮೆಯೆನಿಸುತ್ತದೆ. ಆದರೆ ಅವರು ಮಾಡುವ ಕಾರ್ಯ-ಚಟುವಟಿಕೆಗಳನ್ನು ನೋಡಿ ವಿಷಾದವೂ ಆಗುತ್ತದೆ. ಕಾರಣ ಅವರಲ್ಲಿ ಪ್ರಜ್ಞಾಭಾವ ಇಲ್ಲದಿರುವುದು. ಇತ್ತೀಚೆಗಂತೂ ವಿದ್ಯಾರ್ಥಿಗಳಲ್ಲಿ ಕರ್ತವ್ಯ ಪ್ರಜ್ಞೆ, ಸಮಯ ಪ್ರಜ್ಞೆ, ಅಧ್ಯಯನ ಪ್ರಜ್ಞೆಗಳು ಮಾಯವಾಗುತ್ತಲಿವೆ. ಅಹಿತಕರ ಘಟನೆಗಳು ನಡೆಯಬಾರದೆಂದರೆ ವಿದ್ಯಾರ್ಥಿಗಳಲ್ಲಿ ಪ್ರಜ್ಞಾ ಭಾವ ಇರಬೇಕು. ಅವರಲ್ಲಿ ತಿಳುವಳಿಕೆ ಹೆಚ್ಚಾದರೆ ಉತ್ತಮ ಕಾರ್ಯಚಟುವಟಿಕೆಗಳಲ್ಲಿ ತೊಡಗುವರು. ಆದ್ದರಿಂದ ವಿದ್ಯಾರ್ಥಿಗಳು ಕೇವಲ ವಿದ್ಯಾವಂತರಾದರೆ ಸಾಲದು, ಪ್ರಜ್ಞಾವಂತರಾಗಬೇಕು ಎಂದು ವಿಜಯಪುರ ಜ್ಞಾನಯೋಗಾಶ್ರಮದ ಪೂಜ್ಯಶ್ರೀ ಸಂಗಮೇಶ್ವರ ಸ್ವಾಮಿಗಳು ತಿಳಿಸಿದರು.

ಇಲ್ಲಿನ ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಗದಗ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2024 ಇವರುಗಳ ಸಹಯೋಗದಲ್ಲಿ ಬೇಸಿಗೆ ರಜೆ ಪ್ರಯುಕ್ತ ಶಾಲಾ ಮಕ್ಕಳಿಗಾಗಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸವ ಪ್ರಭೆ ಕ್ಯಾಂಪಸ್) ಆವರಣದಲ್ಲಿ ನಡೆದ 19ನೇ ಸಂಸ್ಕೃತಿ-ಸಂಸ್ಕಾರ ಶಿಬಿರ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.



ಹಿರಿಯರಾದ ನಾವು ಮಕ್ಕಳಿಗೆ ದಿನ ನಿತ್ಯದ ಉಡುಗೆ-ತೊಡುಗೆ, ಆಹಾರ-ವಿಹಾರ, ಆಚಾರ-ವಿಚಾರಗಳನ್ನು ರೂಢಿಸಬೇಕು. ಭಾರತೀಯ ಸಂಸ್ಕೃತಿ, ಸಂಪ್ರದಾಯ, ಪರಂಪರೆಗಳ ಅರಿವು ಮೂಡಿಸಬೇಕು. ಈ ನಿಟ್ಟಿನಲ್ಲಿ ಈ ಸಂಸ್ಕೃತಿ-ಸಂಸ್ಕಾರ ಶಿಬಿರ ಹೆಚ್ಚು ಉಪಯುಕ್ತವಾಗಿದೆ ಎಂದು ಹೇಳಿದರು.

ಸಮಾರಂಭದ ಸಮ್ಮುಖವನ್ನು ಪೂಜ್ಯಶ್ರೀ ಚಂದ್ರಶೇಖರ ಹರ್ಲಾಪೂರ ದೇವರು ವಹಿಸಿ ಸಂದರ್ಭೋಚಿತವಾಗಿ ಮಾತನಾಡಿದರು. ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರು, ಸಂಗೀತ ಶಿಕ್ಷಕಿ ಸುನಂದಾ ಜ್ಯಾನೋಪಂತರ, ಸಂಸ್ಕೃತಿ-ಸಂಸ್ಕಾರ ಶಿಬಿರ ಸಂಯೋಜಕ ಮತ್ತು ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ. ಎಸ್. ಪಲ್ಲೇದ ಉಪಸ್ಥಿತರಿದ್ದರು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಆರ್ನಿಕಾ ಪಾಟೀಲ ಗುರು ಶ್ಲೋಕ ಹೇಳಿದರು. ನೈಯುಕ್ತ ರಡ್ಡಿ, ವೈನವಿ ಪಾಟೀಲ, ನಿಧಿ ಕಟ್ಟಿಮನಿ, ರಿತಿಕಾ ಹೊಸಮನಿ ವಚನ ಗೀತೆ ಹೇಳಿದರು. ನಿಧಿ ಗಿಡ್ಡಕೆಂಚಣ್ಣವರ, ಚಿನ್ಮಯ ಗೌಡರ ಶಿಬಿರ ಬಗ್ಗೆ ಅನಿಸಿಕೆ ತಿಳಿಸಿದರು. ಆದಿಶೇಷ ಜಾಧವ್, ಪ್ರಶಾಂತ ಲಕ್ಕುಂಡಿ, ಮನೋಜ ಸಾಲಗುಂದಿ, ಶ್ರಾವಣಿ ಗುಡಗೂರ ಮತ್ತು ಸಂಗಡಿಗರು ಯೋಗಾಸನ ಪ್ರದರ್ಶಿಸಿದರು. ಶಿಬಿರಾರ್ಥಿಗಳಿಗೆಲ್ಲರಿಗೂ ಪ್ರಮಾಣಪತ್ರ ವಿತರಿಸಲಾಯಿತು.

ಶಿಬಿರ ಶಿಕ್ಷಕಿ ಸುನಂದಾ ಜ್ಯಾನೋಪಂತರ ಪ್ರಾರ್ಥನೆ ಹೇಳಿದರು. ಹೊಂಬಳ ಸರಕಾರಿ ಪದವಿಪೂರ್ವ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಹನಮಂತಗೌಡ ಗೌಡರ ಸ್ವಾಗತಿಸಿದರು. ಶಿಬಿರ ಶಿಕ್ಷಕ ಚೇತನ ಚುಂಚಾ ಪ್ರಾಸ್ತಾವಿಕ ನುಡಿ ತಿಳಿಸಿದರು. ಸಮಾಜ ಸೇವಾಸಕ್ತ ವಿ.ಎಂ. ಮುಂದಿನಮನಿ ಯಶಸ್ಸಿಗೆ ಸಹಕರಿಸಿದ, ದಾಸೋಹ ಸೇವೆ ಸಲ್ಲಿಸಿದ ಸರ್ವರಿಗೂ ಧನ್ಯವಾದ ಅರ್ಪಿಸಿದರು. ಶಿಬಿರದ ಸಹ ಸಂಯೋಜಕ ಎಸ್. ಎಂ. ಬುರಡಿ ಕಾರ್ಯಕ್ರಮ ನಿರೂಪಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಉಪಾಧ್ಯಕ್ಷ ಶಿವಯ್ಯ ನಾಲತ್ವಾಡಮಠ, ತ್ರಿವಿಧ ದಾಸೋಹಿ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಯೋಗ ಪಾಠಶಾಲೆ ಸ್ಥಾಪಿಸಿ ಸರ್ವ ಜನತೆಗೆ ಆರೋಗ್ಯ ಭಾಗ್ಯ ಕರುಣಿಸಿದರೆ, ಶ್ರೀಮಠದ ಪ್ರಸ್ತುತ ಪೀಠಾಧಿಪತಿಗಳಾದ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಯೋಗ ಪಾಠಶಾಲೆಯನ್ನು ಮಹಾವಿದ್ಯಾಲಯವನ್ನಾಗಿ ರೂಪಿಸುವ ಕೃಪಾಶೀರ್ವಾದ ನೀಡಿರುವುದು ಸೌಭಾಗ್ಯವಾಗಿದೆ ಎಂದರು.

## ಶ್ರೀ ರಂಭಾಪುರಿ ಜಗದ್ಗುರುಗಳಿಂದ ಮತದಾನ



■ **ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಲೋಕಸಭಾ ಚುನಾವಣೆಯ ಅಂಗವಾಗಿ ಶುಕ್ರವಾರ ಬಾಳೆಹೊನ್ನೂರು ಶ್ರೀ ರಂಭಾಪುರಿ ಮಠದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಮತ ಚಲಾಯಿಸಿದರು.

ಮತದಾನದ ನಂತರ ಮಾತನಾಡಿದ ಶ್ರೀಗಳು, ಪ್ರಜಾಪ್ರಭುತ್ವದ ಯಶಸ್ಸಿಗಾಗಿ ಪ್ರತಿಯೊಬ್ಬರೂ ಕೂಡಾ ಮತ ಚಲಾವಣೆ ಮಾಡುವುದು ಅವಶ್ಯಕ. ಮತದಾನ ಸಂವಿಧಾನ ನೀಡಿದ ಉನ್ನತ ಹಕ್ಕು ಎಂಬುದನ್ನು ಮರೆಯಬಾರದು. ರಾಜ್ಯದಲ್ಲಿ ಎರಡು ಹಂತದ ಮತದಾನ ನಡೆಯುತ್ತಿದ್ದು, ಮೊದಲ ಹಂತದ ಮತದಾನದಲ್ಲಿ ತಾವು ಮತ ಚಲಾಯಿಸಿದ್ದೇವೆ. ಸುಭದ್ರ ಮತ್ತು ಸದೃಢ ಸರ್ಕಾರದ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಮತದಾನ ಮಾಡಬೇಕು ಎಂದು ಕರೆ ನೀಡಿದರು.

## ಹೊಂಬಳದಲ್ಲಿ ಅದ್ದೂರಿ ಭಂಡಾರ ಜಾತ್ರೆ



■ **ವಿಜಯಸಾಕ್ಷಿ ಸುದ್ದಿ, ಹೊಂಬಳ**

ಸುಮಾರು 20-25 ವರ್ಷಗಳಿಗೂ ಹೆಚ್ಚು ಕಾಲ ನಡೆಯದೇ ಇದ್ದ ಹೊಂಬಳ ಗ್ರಾಮದ ಗ್ರಾಮದೇವತೆ ಶ್ರೀ ದ್ಯಾಮವ್ವದೇವಿ, ಶ್ರೀ ದುರ್ಗಾದೇವಿ, ಶ್ರೀ ಲಕ್ಕಮ್ಮದೇವಿ ಜಾತ್ರೆಯು ಏ.22ರಿಂದ ದೇವಿಯರ ನವೀಕೃತ ವಿಗ್ರಹಗಳ ಮೆರವಣಿಗೆಯೊಂದಿಗೆ ಪ್ರಾರಂಭವಾಗಿ, ಏ. 23, 24ರಂದು ದ್ಯಾಮವ್ವನ ಕಟ್ಟೆಯಲ್ಲಿ ನಾಡಿನ ಒಳಿತಿಗಾಗಿ ಪ್ರಾರ್ಥನೆ ನಂತರ ಸಾರ್ವತ್ರಿಕ ದರ್ಶನ, ಏ.25ರಂದು ಅಮ್ಮನವರ ಪುರ ಪ್ರವೇಶದ ಸಂದರ್ಭದಲ್ಲಿ ಅದ್ದೂರಿ ಭಂಡಾರ ಜಾತ್ರೆಯು ಜರುಗಿ, ಅಮ್ಮನವರ ಮೂಲ ದೇವಾಲಯದಲ್ಲಿ ಪ್ರತಿಷ್ಠಾಪನೆ ನಂತರ ಉಡಿ ತುಂಬುವ ಕಾರ್ಯಕ್ರಮದೊಂದಿಗೆ ಜಾತ್ರೆಯು ಸಂಪನ್ನಗೊಂಡಿತು.

ಗುರುವಾರ ಜರುಗಿದ ಭಂಡಾರ ಜಾತ್ರೆಯಲ್ಲಿ ಹೊಂಬಳ ಗ್ರಾಮದ ಭಕ್ತಾದಿಗಳು ಸಡಗರ, ಭಕ್ತಿ, ಅತ್ಯುತ್ಸಾಹದಿಂದ ಪಾಲ್ಗೊಂಡರು. ಗ್ರಾಮ ದೇವತೆಯರ ವೈಶಿಷ್ಟ್ಯಪೂರ್ಣ ಜಾತ್ರಾ ಮಹೋತ್ಸವಕ್ಕೆ ಸಹಕರಿಸಿದ ಸರ್ವರಿಗೂ ಮಹೇಶ ಲಿಂಗದಾಳ ಕೃತಜ್ಞತೆ ಸಲ್ಲಿಸಿದ್ದಾರೆ.

### ಬಸವ ಯೋಗ ಮಂದಿರದಲ್ಲಿ ಅಕ್ಕಮಹಾದೇವಿ ಜಯಂತಿ

# ಅಕ್ಕನ ವಚನಗಳು ಸುಖ ಜೀವನದ ಸೋಪಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಇಂದು ಮಹಿಳೆಯರು ಸಾಕಷ್ಟು ಸೌಲಭ್ಯಗಳ ಅನುಕೂಲತೆಯಿಂದ ಐಷಾರಾಮಿ ಜೀವನ ನಡೆಸುತ್ತಿದ್ದರೂ ಜೀವನದಲ್ಲಿ ಸುಖ, ಶಾಂತಿ, ನೆಮ್ಮದಿಗಳು ಇಲ್ಲದಾಗಿವೆ. ಯಾವದೇ ಹೆಚ್ಚಿನ ಸೌಲಭ್ಯಗಳು ಇಲ್ಲದ ಅಂದಿನ ಕಾಲದಲ್ಲಿ ಅಕ್ಕಮಹಾದೇವಿ ಅನೇಕ ಸಂಕಷ್ಟಗಳನ್ನು ಎದುರಿಸಿ ಶಾಂತಿ, ಸಮಾಧಾನದಿಂದ ಬಾಳಿ ಬದುಕಿದ್ದಳೆಂಬುದಕ್ಕೆ ಅಕ್ಕಮಹಾದೇವಿಯ ಅನೇಕ ವಚನಗಳು ಸಾಕ್ಷಿಯಾಗಿವೆ ಎಂದು ನಿವೃತ್ತ ಶಿಕ್ಷಕಿ ಶಾಂತಾ ಕುಂದಗೋಳ ಅಭಿಪ್ರಾಯಪಟ್ಟರು.

ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರವು ಸಿದ್ಧಲಿಂಗ ನಗರದ ಬಸವ ಯೋಗ ಮಂದಿರದಲ್ಲಿ ಆಚರಿಸಿದ ಶಿವಶರಣೆ ಅಕ್ಕಮಹಾದೇವಿ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.



ಅಕ್ಕ ಮಹಾದೇವಿ ಒಂದು ವಚನದಲ್ಲಿ ತಿಳಿಸಿರುವಂತೆ ನಡೆ, ನುಡಿ, ತನು, ಮನ, ಭಾವ ಶುದ್ಧವಿದ್ದವರನ್ನು ತೋರಿ ಎನ್ನನು ಬದುಕಿಸಯ್ಯಾ ಎಂದು ಚನ್ನಮಲ್ಲಿಕಾರ್ಜುನನಲ್ಲಿ ಪ್ರಾರ್ಥಿಸಿರುವಂತೆ ಮತ್ತು ಬೆಟ್ಟದ ಮೇಲೆ, ಸಮುದ್ರದ ದಂಡೆ, ಸಂತೆಯಲ್ಲಿ ಮನೆ ಮಾಡಿದಾಗ ಸ್ತುತಿ-ನಿಂದೆಗಳು ಬಂದೆಡೆ ಮನದಲ್ಲಿ ಕೋಪವ ತಾಳದೆ ಸಮಾಧಾನಿಯಾಗಿರಬೇಕೆಂದು ಹೇಳಿರುವಂತೆ ಮಹಿಳೆ ಜೀವನ ನಡೆಸಿದ್ದಾದರೆ ಸುಖ ಜೀವನ ಅವರದಾಗುವುದು. ಈ ನಿಟ್ಟಿನಲ್ಲಿ ಶಿವಶರಣೆ ಅಕ್ಕಮಹಾದೇವಿ ವಚನಗಳು ಮಹಿಳೆಯರ ಸುಖ ಜೀವನದ ಸೋಪಾನಗಳಾಗಿವೆ.

ಮಹಿಳೆಯರಾದ ನಾವೆಲ್ಲರೂ ಇಂದು ಆಡಂಬರ, ಐಷಾರಾಮಿ ಜೀವನಕ್ಕೆ ಹೆಚ್ಚಿನ ಗಮನ ಕೊಡದೇ ಆದರ್ಶಮಯ, ಸುಖಮಯ, ಸಮಾಧಾನಕರ, ಶಾಂತಿ, ನೆಮ್ಮದಿಯ ಬದುಕಿಗಾಗಿ ಅಕ್ಕನ ತತ್ವಾದರ್ಶಗಳನ್ನು ಪರಿಪಾಲಿಸಬೇಕೆಂದು ಸಭಿಕರಲ್ಲಿ ವಿನಂತಿಸಿದರು.

ಅಧ್ಯಕ್ಷತೆ ವಹಿಸಿದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ ಮಾತನಾಡಿ, ಎಲ್ಲರಿಗೂ ಅಕ್ಕನಾದಂತೆ ಇಂದು ಮಹಿಳೆಯರು ಕೌಟುಂಬಿಕ, ಸಾಮಾಜಿಕ ಜೀವನದಲ್ಲಿ ಎದುರಾಗುವ ಅನ್ಯಾಯ, ಅನೀತಿ, ಅತ್ಯಾಚಾರಗಳನ್ನು ಪ್ರತಿಭಟಿಸುವ ಶಕ್ತಿವಂತರಾಗಬೇಕು. ಅದಕ್ಕಾಗಿ ಅಕ್ಕನ ಜೀವನ ಚರಿತ್ರೆಯನ್ನು ಆಧಾರವಾಗಿಟ್ಟುಕೊಳ್ಳಬೇಕೆಂದು ಹೇಳಿದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಮಾಜಿ ಅಧ್ಯಕ್ಷೆ ಜಯಶ್ರೀ ವಸ್ತ್ರದ, ಹಿರಿಯ ಸದಸ್ಯೆ ಗಿರಿಜಕ್ಕ ನಾಲತ್ವಾಡಮಠ ಉಪಸ್ಥಿತರಿದ್ದು ಪ್ರಾಸ್ತಾವಿಕವಾಗಿ ಮಾತನಾಡಿದರು.

ವೀಣಾ ಮಾಲಿಪಾಟೀಲ, ಶಕುಂತಲಾ ಬೆಲ್ಲದ, ಅರುಣಾ ಇಂಗಳಳ್ಳಿ, ಗಿರಿಜಾ ಅಂಗಡಿ, ಪ್ರೇಮಾ ಗಾಣಿಗೇರ, ಶೋಭಾ ಭಾಂಡಗೆ, ಮಹಾದೇವಿ ಚರಂತಿಮಠ ಇನ್ನಿತರೆ ಸದಸ್ಯನಿಯರು ಪಾಲ್ಗೊಂಡಿದ್ದರು. ಗೌರಿ ಜಿರಂಕಳಿ ಪ್ರಾರ್ಥಿಸಿದರು. ವಿಜಯಲಕ್ಷ್ಮೀ ಮೇಕಳಿ ಸ್ವಾಗತಿಸಿದರು. ಕಾರ್ಯದರ್ಶಿ ಸುಲೋಚನಾ ಐಹೊಳ್ಳಿ ಕಾರ್ಯಕ್ರಮ ನಿರೂಪಿಸಿದರು.

## ಪತ್ನಿಯನ್ನು ಕೊಂದ ಗಂಡನಿಗೆ ಜೀವಾವಧಿ ಶಿಕ್ಷೆ ಪ್ರಕಟ

■ **ವಿಜಯಸಾಕ್ಷಿ ಸುದ್ದಿ, ಗದಗ**

ರೋಣ ತಾಲೂಕಿನ ಹೊಳೆಆಲೂರ ಗ್ರಾಮದಲ್ಲಿ ನಡೆದ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಗದುಗಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

2019ರ ಫೆಬ್ರವರಿ 4ರಂದು ಹೊಳೆಆಲೂರ ಗ್ರಾಮದ ಲೋಕೇಶ ಕಾಳಿಂಗಪ್ಪ ಮಹಾರಾಜನವರ, ತನ್ನ ಪತ್ನಿ ಲಕ್ಷ್ಮೀಯನ್ನು ಕೊಲೆ ಮಾಡಿದ್ದ. ಮದುವೆಯಾಗಿ 13 ವರ್ಷವಾಗಿ, ಮೂವರು ಮಕ್ಕಳಿದ್ದರೂ ಪತ್ನಿಯ ಮೇಲೆ ಅನುಮಾನ ಪಡುತ್ತಿದ್ದ ಲೋಕೇಶ, ಕಟ್ಟಿಗೆಯಿಂದ ಹೊಡೆದು ಪತ್ನಿಯನ್ನು ಕೊಲೆ ಮಾಡಿ, ಸಾಕ್ಷಿ ನಾಶ ಮಾಡುವ ಉದ್ದೇಶದಿಂದ ಹೆಣವನ್ನು ರಸ್ತೆ ಪಕ್ಕದಲ್ಲಿ ಎಸೆದು ಹೋಗಿದ್ದ.

ಈ ಬಗ್ಗೆ ರೋಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಸಿಪಿಐ ಎಂ.ಐ. ನಡುವಿನಮನಿ ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆಯಲ್ಲಿ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ನ್ಯಾಯಾಧೀಶ ಬಸವರಾಜ, ಅಪರಾಧಿಗೆ ಜೀವಾವಧಿ ಶಿಕ್ಷೆ ಹಾಗೂ 11 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರಕಾರದ ಪರವಾಗಿ ಸವಿತಾ ಶಿಗ್ಲಿ ವಾದ ಮಂಡಿಸಿದ್ದರು.

## ಧರ್ಮದ ಆಧಾರದ ಮೇಲೆ ಮತಯಾಚಿಸಿದ ಆರೋಪ: ತೇಜಸ್ವಿ ಸೂರ್ಯ ವಿರುದ್ಧ ಪ್ರಕರಣ ದಾಖಲು



■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಧರ್ಮದ ಆಧಾರದ ಮೇಲೆ ಮತಯಾಚಿಸಿದ ಆರೋಪದಡಿ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ತೇಜಸ್ವಿ ಸೂರ್ಯ ವಿರುದ್ಧ ಚುನಾವಣಾ ಆಯೋಗ ನಿನ್ನೆ (ಏ.25) ಪ್ರಕರಣ ದಾಖಲಿಸಿದೆ .ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ನೀಡಿರುವ ರಾಜ್ಯ ಚುನಾವಣಾ ಆಯೋಗ, “ಧರ್ಮದ ಆಧಾರದಲ್ಲಿ ಮತಯಾಚನೆ ಮತ್ತು ಈ ಕುರಿತ ವಿಡಿಯೋವೊಂದನ್ನು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದ ಆರೋಪದ ಮೇಲೆ ಏ.25ರಂದು ಜಯನಗರ ಪೊಲೀಸ್ ಠಾಣೆಯಲ್ಲಿ ಸೆಕ್ಷನ್ 123(3) ರ ಅಡಿ ತೇಜಸ್ವಿ ಸೂರ್ಯ ವಿರುದ್ಧ ಪ್ರಕರಣ ದಾಖಲಾಗಿದೆ” ಎಂದು ತಿಳಿಸಿದೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯ ರೆಡ್ಡಿ “ತೇಜಸ್ವಿ ಸೂರ್ಯ ನೀತಿ ಸಂಹಿತೆಯನ್ನು ಉಲ್ಲಂಘಿಸಿದ್ದಾರೆ. ಈ ಹಿನ್ನೆಲೆ ಅವರನ್ನು ಅನರ್ಹಗೊಳಿಸಬೇಕು” ಎಂದು ಚುನಾವಣಾ ಆಯೋಗಕ್ಕೆ ಒತ್ತಾಯಿಸಿದ್ದಾರೆ.

## ಬರ ಪರಿಹಾರ ವಿತರಣೆಯಲ್ಲಿ ರಾಜ್ಯಕ್ಕೆ ಬಿಜೆಪಿಯಿಂದ ಅನ್ಯಾಯ: ಗಡ್ಡದೇವರಮಠ ಆರೋಪ

■ **ವಿಜಯಸಾಕ್ಷಿ ಸುದ್ದಿ, ಗದಗ**




ರಾಜಕೀಯ ದುರುದ್ದೇಶದಿಂದ ಬಿಜೆಪಿ ರಾಜ್ಯಕ್ಕೆ ಬರಬೇಕಿದ್ದ ಬರ ಪರಿಹಾರ ವಿತರಣೆಯಲ್ಲಿ ಅನ್ಯಾಯ ಮಾಡಿದೆ. ಚುನಾವಣಾ ಲಾಭಕ್ಕಾಗಿ ನಾಲ್ಕೂವರೆ ಸಾವಿರ ಕೋಟಿ ಬರ ಪರಿಹಾರವನ್ನು ತನ್ನಲ್ಲಿಯೇ ಇಟ್ಟುಕೊಂಡು ಕೇವಲ ಭಾವನಾತ್ಮಕ ವಿಚಾರಗಳಡಿ ರಾಜಕಾರಣ ಮಾಡುತ್ತಿದೆ ಎಂದು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಹೇಳಿದರು.

ಅವರು ಗದುಗಿನ ಖಾನ್ ತೋಟ ಜನತಾ ಕಾಲೋನಿಯ 20ನೇ ವಾರ್ಡ್‌ನಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮತಯಾಚಿಸಿ ಮಾತನಾಡಿದರು.

ಗ್ಯಾರಂಟಿ ಯೋಜನೆಗಳ ಯಶಸ್ಸಿನಿಂದ ಕಂಗೆಟ್ಟ ಬಿಜೆಪಿ ವೃಥಾ ಆರೋಪಗಳಡಿ ರಾಜಕೀಯ ಮಾಡುತ್ತಿದೆ. ಸಂಕಷ್ಟಗಳ ಸಂದರ್ಭದಲ್ಲಿ ಸ್ಪಂದಿಸದ ಬಿಜೆಪಿಯನ್ನು ಸೋಲಿಸುವುದು ನಮ್ಮೆಲ್ಲರ ಸ್ವಾಭಿಮಾನದ ಪ್ರಶ್ನೆಯಾಗಿದೆ. ಅದಕ್ಕಾಗಿ ತಮ್ಮ ಗೆಲುವಿಗೆ ತಾವು ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಚಿವ ಎಚ್.ಕೆ.ಪಾಟೀಲ ಮಾತನಾಡಿ, ನಾವು ಕೇಂದ್ರ ಸರ್ಕಾರಕ್ಕೆ ಬರ ಪರಿಹಾರ ಹಣ ಕೇಳುತ್ತಿದ್ದೇವೆ, ಹೊರತು ಯಾವುದೇ ಭಿಕ್ಷೆಯನ್ನು ಕೇಳುತ್ತಿಲ್ಲ. ಆದರೆ ದೇಶದ ರಕ್ಷಕರಾಗಿರುವ ಮೋದಿ ಮತ್ತು ಅಮಿತ ಶಾ ಖಾಲಿ ಚೊಂಬು ತೆಗೆದುಕೊಳ್ಳುತ್ತಿದ್ದು, ಪ್ರಸಕ್ತ ಚುನಾವಣೆಯಲ್ಲಿ ರಾಜ್ಯದ ಜನತೆ ತಕ್ಕ ಉತ್ತರ ನೀಡಲಿದ್ದಾರೆಂದರು.

ಮಹದಾಯಿ ಯೋಜನೆಗೆ ಪರಿಸರ ಇಲಾಖೆ ಅನುಮತಿ ಕೊಡಿಸಿ ಎಂದು ಹಲವು ಬಾರಿ ಗೋಗರೆದರೂ ಚೊಂಬು ತೆಗೆದುಕೊಳ್ಳಿ ಎನ್ನುತ್ತಿದ್ದಾರೆಂದರು.

ಕೇಂದ್ರದಲ್ಲಿ ಅಸ್ತಿತ್ವದಲ್ಲಿರುವ ಬಿಜೆಪಿ ಸರ್ಕಾರವು ಕರ್ನಾಟಕಕ್ಕೆ ಸತತವಾಗಿ ಅನ್ಯಾಯವನ್ನು ಮಾಡುತ್ತ ಬಂದಿದ್ದು ರಾಜ್ಯದ ಬಗ್ಗೆ ಅತೀವ ನಿರ್ಲಕ್ಷ್ಯ ತೋರಿದೆ ಎಂದು ಆರೋಪಿಸಿದರು.

ಇದು ಕನ್ನಡಿಗರನ್ನು ಕೆಣಕುವ ಪ್ರಯತ್ನ. ಹಾಗಾಗಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಕೂಡಲೇ ಪ್ರಣಾಳಿಕೆಯಲ್ಲಿ ಘೋಷಿಸಿರುವಂತೆ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನಕ್ಕೆ ತಂದು ರಾಜ್ಯಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸರಳ ಮತ್ತು ಕ್ರಿಯಾಶೀಲ ವ್ಯಕ್ತಿತ್ವದ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಲೋಕಸಭಾ ಚುನಾವಣೆಯಲ್ಲಿ ಮತ ನೀಡಿ ಆಶೀರ್ವದಿಸಬೇಕೆಂದು ಮನವಿ ಮಾಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಸಭೆ ಸದಸ್ಯೆ ಪರ್ವಿನ್ ಬಾನು ಮುಲ್ಲಾ, ಸ್ಥಳೀಯರಾದ ಪ್ರಸನ್ನ ಶಾಬಾದಿಮಠ, ಹನುಮಂತಪ್ಪ ಮುಂಡರಗಿ, ಕೆ.ಆರ್.ಸುಣಗಾರ, ಎಂ.ಎ.ಮೌಲ್ವಿ, ಎಚ್.ಕೆ.ಮುಲ್ಲಾ, ಮೇಘರಾಜ ಕಲಬುರ್ಗಿ, ಮುಸ್ಕಾನ್ ಸಯ್ಯದ್ ಉಪಸ್ಥಿತರಿದ್ದರು.

## ಧಾರವಾಡ ಮತಕ್ಷೇತ್ರದಲ್ಲಿ 18,31,975 ಮತದಾರರು

■ **ವಿಜಯಸಾಕ್ಷಿ ಸುದ್ದಿ, ಧಾರವಾಡ**



ಭಾರತ ಚುನಾವಣಾ ಆಯೋಗ ಅಂತಿಮವಾಗಿ ಏಪ್ರಿಲ್ 19, 2024ರಂದು ಪ್ರಕಟಿಸಿರುವ ಮತದಾರ ಪಟ್ಟಿಯಲ್ಲಿ ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಎಂಟು ವಿಧಾನಸಭಾ ಮತಕ್ಷೇತ್ರಗಳು ಸೇರಿ 9,17,926 ಪುರುಷ, 9,13,949 ಮಹಿಳಾ, 100 ತೃತೀಯಲಿಂಗಗಳು ಸೇರಿ ಒಟ್ಟು 18,31,975 ಮತದಾರರಿದ್ದು, ಇವರೆಲ್ಲರೂ ಮೇ 7ರಂದು ಜರುಗುವ ಸಾರ್ವತ್ರಿಕ ಚುನಾವಣೆಯಲ್ಲಿ ಮತ ಚಲಾಯಿಸಲಿದ್ದಾರೆ ಎಂದು ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 47,204 ಜನ ಹೊಸದಾಗಿ ನೋಂದಾಯಿತ ಯುವ ಮತದಾರರು, ವಿಕಲಚೇತನರಾದ 25,787 ಹಾಗೂ 18,626 ಜನ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಈ ಮತದಾರ ಪಟ್ಟಿಯಲ್ಲಿದ್ದಾರೆ. ಇತರೆ ವಿಧಾನಸಭಾ ಮತಕ್ಷೇತ್ರಗಳಿಗೆ ಹೋಲಿಕೆ ಮಾಡಿದಾಗ ಹುಬ್ಬಳ್ಳಿ-ಧಾರವಾಡ ಪಶ್ಚಿಮ ವಿಧಾನಸಭಾ ಮತಕ್ಷೇತ್ರದಲ್ಲಿ 3,789 ಜನ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ಕಲಘಟಗಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ 5.172 ಜನ ವಿಕಲಚೇತನರು ಮತ್ತು 6,556 ಯುವ ಮತದಾರರು ಹೆಚ್ಚಿದ್ದಾರೆ ಎಂದು ಚುನಾವಣಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಧಾರವಾಡ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ 8 ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 25,005 ಯುವಕರು, 22,194 ಯುವತಿಯರು ಮತ್ತು ತೃತೀಯಲಿಂಗ 5 ಸೇರಿ ಒಟ್ಟು 47,204 ಮತದಾರರು ನೋಂದಾಯಿತರಾಗಿದ್ದಾರೆ. 11-ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ 8 ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 25787 ವಿಕಲಚೇತನ ಮತದಾರರು ನೊಂದಣಿಯಾಗಿದ್ದಾರೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

## ರೋಟರ್‍ಯಾಕ್ಟ್ ಸದಸ್ಯರಿಂದ ವೃದ್ಧಾಶ್ರಮಕ್ಕೆ ಭೇಟಿ




■ **ವಿಜಯಸಾಕ್ಷಿ ಸುದ್ದಿ, ಗದಗ**

ರೋಟರ್‍ಯಾಕ್ಟ್ ಸಂಸ್ಥೆ ಜೆ.ಟಿ. ಕಾಲೇಜ್ ಬಿಸಿಎ & ಬಿಬಿಎ ಗದಗ ಹಾಗೂ ರೋಟರಿ ಸಂಸ್ಥೆ ಗದಗ ಬೆಟಗೇರಿಯ ಸದಸ್ಯರು ಜೀವನ ಜ್ಯೋತಿ ಶಿವರತ್ನ ವೃದ್ಧಾಶ್ರಮಕ್ಕೆ ಭೇಟಿ ನೀಡಿ, ಆಶ್ರಮದಲ್ಲಿರುವ ಸುಮಾರು 20 ಜನ ವೃದ್ಧರ ಆರೋಗ್ಯವನ್ನು ವಿಚಾರಿಸಿದರು.

ಜೀವನ ಜ್ಯೋತಿ ಶಿವರತ್ನ ವೃದ್ಧಾಶ್ರಮದ ಮೇಲ್ವಿಚಾರಕರಾದ ಮಂಜುಳಾ ಲಕ್ಕುಂಡಿಯವರು ಎಲ್ಲ ವಿದ್ಯಾರ್ಥಿ ಸದಸ್ಯರನ್ನು ಸ್ವಾಗತಿದರು. ಸಂಸ್ಥೆಯ ಅಧ್ಯಕ್ಷ ವಿಶ್ವಾಸ ಕೊಪ್ಪಳ, ಕಾರ್ಯದರ್ಶಿ ವಿರೇಂದ್ರ ಚನ್ನಪ್ಪನ್ನವರ, ಪ್ರಜ್ವಲ, ರಾಜು, ಪ್ರೀತಮ್, ಶಮಂತ, ಸಂಗಮೇಶ, ಪ್ರಿಯಾಂಕಾ, ಶ್ರೀನಾಥ, ಶಿವಕುಮಾರ, ಪಲ್ಲವಿ, ಶ್ರದ್ಧಾ, ಪ್ರಜ್ವಲ್ ಜೆ, ಕಲ್ಲಯ್ಯ, ರಾಘವೇಂದ್ರ, ಚಂದನಾ, ಪುಷ್ಪಾ ಹಾಗೂ ರೋಟರಿ ಸಂಸ್ಥೆಯ ಕಾರ್ಯದರ್ಶಿ ವೀಣಾ ತಿರ್ಲಾಪೂರ, ಸದಸ್ಯ ರೊ. ಶ್ರೀಧರ ಸುಲ್ತಾನಪೂರ ಮುಂತಾದವರು ಉಪಸ್ಥಿತರಿದ್ದರು.

## ಗೌಪ್ಯತೆಯ ಬದ್ಧತೆ ಮುರಿಯಲು ಒತ್ತಾಯಿಸಿದರೆ ಭಾರತ ತೊರೆಯುತ್ತೇವೆ: ನ್ಯಾಯಾಲಯಕ್ಕೆ ತಿಳಿಸಿದ ವಾಟ್ಸಾಪ್

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**

ವಾಟ್ಸಾಪ್‌ನಲ್ಲಿ ಸಂದೇಶಗಳ ಖಾಸಗಿತನ/ಗೌಪ್ಯತೆ (ಎಂಡ್-ಟು-ಎಂಡ್ ಎನ್‌ಕ್ರಿಪ್ಶನ್) ಯಿಂದ ಸಂದೇಶ ಕಳಿಸಿದವರು, ಸ್ವೀಕರಿಸಿದವರಲ್ಲದೆ ಮೂರನೇ ವ್ಯಕ್ತಿ ಆ ಸಂದೇಶ ನೋಡಲಾಗದು. ಈ ನಿಯಮವನ್ನು ಉಲ್ಲಂಘಿಸಲು ಒತ್ತಾಯಿಸಿದರೆ ಭಾರತದಲ್ಲಿ ತನ್ನ ಕಾರ್ಯಾಚರಣೆಯನ್ನು ರದ್ದುಗೊಳಿಸುವುದಾಗಿ ಮೆಟಾ ಒಡೆತನದ ವಾಟ್ಸಾಪ್ ಗುರುವಾರ ದೆಹಲಿ ಹೈಕೋರ್ಟ್‌ಗೆ ತಿಳಿಸಿದೆ.

ಸಾಮಾಜಿಕ ಮಾಧ್ಯಮ ವೇದಿಕೆಗಳನ್ನು ನಿಯಂತ್ರಿಸುವ ‘ಮಾಹಿತಿ ತಂತ್ರಜ್ಞಾನ ನಿಯಮ ನಿಯಮಗಳು-2021’ ಅನ್ನು ಪ್ರಶ್ನಿಸಿ 2021ರಲ್ಲಿ ವಾಟ್ಸಾಪ್ ನ್ಯಾಯಾಲಯದ ಮೆಟ್ಟಿಲೇರಿತ್ತು. ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಹಂಗಾಮಿ ಮುಖ್ಯ ನ್ಯಾಯಮೂರ್ತಿ ಮನಮೋಹನ್ ಮತ್ತು ನ್ಯಾಯಮೂರ್ತಿ ಮನಮೀತ್ ಪ್ರೀತಮ್ ಸಿಂಗ್ ಅರೋರಾ ಅವರಿದ್ದ ವಿಭಾಗೀಯ ಪೀಠ ನಡೆಸುತ್ತಿದೆ. “ಬಳಕೆದಾರರ ಖಾಸಗಿತನವನ್ನು ಉಲ್ಲಂಘಿಸುವಂತೆ ಒತ್ತಾಯಿಸಿದರೆ ಭಾರತ ತೊರೆಯುತ್ತೇವೆ” ಎಂದು ವಾಟ್ಸಾಪ್ ಕಂಪನಿಯ ವಕೀಲ ತೇಜಸ್ ಕರಿಯಾ ಹೇಳಿದ್ದಾರೆ ಎಂದು ತಿಳಿದು ಬಂದಿದೆ.

## ಬಿಜೆಪಿ ದೇಶದಲ್ಲಿ ಮಹತ್ತರ ಬದಲಾವಣೆ ತಂದಿದೆ



■ ವಿಜಯಸಾಕ್ಷಿ ಸುದ್ದಿ, ಗದಗ

ರೈತರು ನಮ್ಮ ದೇಶದ ಪ್ರಗತಿಗೆ ಬೆನ್ನೆಲುಬು. ಜಾಗತಿಕ ಬೆಲೆ ಏರಿಕೆಯ ನಡುವೆಯೂ ಕೃಷಿ ಉತ್ತೇಜನಕ್ಕೆ ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ಕಾರಣದಿಂದ ರೈತರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ತಮ್ಮ ಅಮೂಲ್ಯ ಮತ ನೀಡಿ ಎಂದು ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಮವನಿ ಮಾಡಿದ್ದಾರೆ.

ಕಳೆದ ಹತ್ತು ವರ್ಷದಲ್ಲಿ ದೇಶದ ಅಭಿವೃದ್ಧಿ ನಾಗಾಲೋಟದಲ್ಲಿ ಸಾಗಿದೆ. ದೇಶದ ಜನರ ಯೋಚನಾ ದೃಷ್ಟಿಯೂ ಬದಲಾಗಿದೆ. ಭಾರತದ ಯುವಕರು 2047ರ ಹೊತ್ತಿಗೆ ವಿಕಸಿತ ಭಾರತದ ನಿರ್ಮಾಣದ ಕನಸನ್ನು ಕಾಣುತ್ತಿದ್ದಾರೆ. ಆತ್ಮನಿರ್ಭರ ಭಾರತದ ಯೋಜನೆಯೊಂದಿಗೆ ಆ ಗುರಿ ತಲುಪುವುದು ಕಷ್ಟಸಾಧ್ಯವಲ್ಲ. ಈ ಕನಸುಗಳು ನನಸಾಗಲು ಯುವ ಜನತೆ ಸೇರಿ ಕುಟುಂಬದ ಎಲ್ಲ ಸದಸ್ಯರು ಬಿಜೆಪಿಗೆ ಮತ ಹಾಕಿಸಿ ಗೆಲ್ಲಿಸಬೇಕು.

ಮೂಲಭೂತ ಸೌಕರ್ಯದಿಂದ ವಂಚಿತರಾಗಿದ್ದ ಭಾರತದ ಜನತೆಗೆ ನಮ್ಮ ಸರಕಾರದ ಯೋಜನಾಬದ್ಧ ನೀತಿಯ ಕಾರಣ ಸೂರು, ಅಡುಗೆ ಅನಿಲ, ವಿದ್ಯುತ್, ಶೌಚಾಲಯ, ಬ್ಯಾಂಕ್ ಖಾತೆ, ನೀರು ಮುಂತಾದ ಸೌಲಭ್ಯಗಳು ಸಿಕ್ಕಿವೆ. ಈ ಕಾಲದ ಹೊಸ ತಂತ್ರಜ್ಞಾನದ ಸೌಲಭ್ಯಗಳೂ ಅವರಿಗೆ ದಕ್ಕಿದೆ. ದೇಶ ಸಾಧಿಸಿದ ಈ ಅಭೂತಪೂರ್ವ ಸಾಧನೆಯಿಂದಾಗಿ ದೇಶದ ಮಹಿಳೆಯರು, ರೈತರು, ಮೀನುಗಾರರು, ಬೀದಿ ವ್ಯಾಪಾರಿಗಳು, ಸಣ್ಣ ಉದ್ಯಮಿಗಳು. ಎಸ್ಸಿ, ಎಸ್‌ಟಿ ಮತ್ತು ಒಬಿಸಿ ಸಮುದಾಯಗಳ ಜೀವನದಲ್ಲಿ ಮಹತ್ತರ ಬದಲಾವಣೆ ತಂದಿದೆ. ಈ ಬದಲಾವಣೆ ಇನ್ನೂ ಮುಂದೆ ಸಾಗಬೇಕಿದ್ದು, ಅದಕ್ಕಾಗಿ ನಾವೆಲ್ಲರೂ ಶ್ರಮಿಸೋಣ ಎಂದಿದ್ದಾರೆ.

## ಕಾಂಗ್ರೆಸ್ ಸರ್ಕಾರ ನಂಬಿಕೆ ಉಳಿಸಿಕೊಂಡಿದೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದಲ್ಲಿ ವಾಸವಾಗಿರುವ ಅಂಬಿಗ, ಸುಣಗಾರ, ಬಾರಕೇರ ಸಮುದಾಯದ ಮನೆ ಮನೆಗೆ ಭೇಟಿ ನೀಡಿ ಮತಯಾಚನೆ ಮಾಡಿದ ಕಾಂಗ್ರೆಸ್ ಮೀನುಗಾರಿಕೆ ಶಹರ ಘಟಕ ಅಧ್ಯಕ್ಷರು ಹಾಗೂ ಅಂಬಿಗ ಸಮಾಜದ ಜಿಲ್ಲಾ ಕಾರ್ಯದರ್ಶಿ ಸಂಗಮೇಶ ಹಾದಿಮನಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಮತ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಬಡವರ ಪಕ್ಷ, ನುಡಿದಂತೆ ನಡೆದ ಸರಕಾರ. ಬಡವರಿಗಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ನಂಬಿಕೆ ಉಳಿಸಿಕೊಂಡಿದೆ. ತಾವೆಲ್ಲರೂ ಕಾಂಗ್ರೆಸ್ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕು ಎಂದು ಮನವಿ ಮಾಡಿಕೊಂಡರು.

ಸಮಾಜದ ಮಹಿಳಾ ಅಧ್ಯಕ್ಷೆ ಸುಜಾತಾ ಗುಡಿಸಾಗರ, ರಾಜು ಪೂಜಾರ, ಹರೀಶ ಬಾರಕೇರ, ಬಸವರಾಜ್ ಗುಡಿಸಾಗರ್ ಮಹಿಳಾ ಸದಸ್ಯರು ಇದ್ದರು.

### ರಾಜಕಾರಣಕ್ಕಾಗಿ ಸಿಎಂ ಹಿಂದುಳಿದ ವರ್ಗಗಳ ಆಯೋಗದ ವರದಿ ಇಟ್ಟುಕೊಂಡಿದ್ದಾರೆ: ಬಸವರಾಜ ಬೊಮ್ಮಾಯಿ

# ಮೇ 7 ಕ್ಕೆ ಬಿಜೆಪಿಗೆ ಮತ, ಕಾಂಗ್ರೆಸ್‌ಗೆ ಚೊಂಬು

■ ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣಾ ರಾಜಕಾರಣಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿಂದುಳಿದ ವರ್ಗಗಳ ಆಯೋಗದ ವರದಿ ಪಡೆದು ಇಟ್ಟುಕೊಂಡಿದ್ದಾರೆ. ರಾಜ್ಯ ಸರ್ಕಾರ ಬಳಿ ಇರುವ ವರದಿಯನ್ನೇ ಬಿಡುಗಡೆ ಮಾಡಿಸಲಾಗದ ರಾಹುಲ್ ಗಾಂಧಿ, ದೇಶಾದ್ಯಂತ ಹಿಂದುಳಿದ ವರ್ಗಗಳ ಸಮೀಕ್ಷೆ ಮಾಡುವುದಾಗಿ ಜನರಿಗೆ ಸುಳ್ಳು ಹೇಳುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಅವರು ಶುಕ್ರವಾರ ಹಾನಗಲ್ ವಿಧಾನಸಭಾ ಕ್ಷೇತ್ರದ ಮಾರನಬೀಡ್, ಕಂಚಿನೆಗಳೂರು, ಮಲಗುಂದ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದರು.

ಈ ರಾಜ್ಯ ಸರ್ಕಾರದವರು ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ಸಮಾಜಗಳ ನಡುವೆ ಸಂಘರ್ಷ



ಹುಟ್ಟಿಸುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರು ಹಿಂದುಳಿದ ವರ್ಗದ ಆಯೋಗದ ವರದಿ ಪಡೆದು ಇಟ್ಟುಕೊಂಡಿದ್ದಾರೆ.

ರಾಹುಲ್ ಗಾಂಧಿಯವರು ದೇಶಾದ್ಯಂತ ಹಿಂದುಳಿದ ವರ್ಗಗಳ ಸಮೀಕ್ಷೆ ಮಾಡುವುದಾಗಿ ಹೇಳುತ್ತಾರೆ. ಆದರೆ, ರಾಜ್ಯದಲ್ಲಿ ವರದಿ ಪಡೆದಿದ್ದರೂ ಅದನ್ನು ಬಿಡುಗಡೆ ಮಾಡುತ್ತಿಲ್ಲ. ವರದಿ ಇಟ್ಟುಕೊಂಡು ರಾಜಕಾರಣ ಮಾಡುತ್ತಿದ್ದಾರೆ ಎಂದು ಹೇಳಿದರು.

ಇನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪಿತ್ರಾರ್ಜಿತ ಆಸ್ತಿ ಮಕ್ಕಳಿಗೆ ಬರಬೇಕಾದರೆ ಶೇ 55% ರಷ್ಟು ಸರ್ಕಾರಕ್ಕೆ ತೆರಿಗೆ ಕಟ್ಟಬೇಕು ಎನ್ನುತ್ತಾರೆ. ಮೊದಲು ತೆರಿಗೆ ಕಟ್ಟುವ ವ್ಯವಸ್ಥೆ ಇತ್ತು. ಆಗಿನ ಪ್ರಧಾನಿ ರಾಜೀವ್ ಗಾಂಧಿ ಅವರು ತಮ್ಮ ತಾಯಿಯ ಆಸ್ತಿ ಪಡೆಯಲು ಸರ್ಕಾರಕ್ಕೆ ತೆರಿಗೆ ಕಟ್ಟಬೇಕು ಅನ್ನುವ ಕಾರಣಕ್ಕೆ ಆ ಕಾಯ್ದೆಯನ್ನು ರದ್ದು ಮಾಡಿದರು. ಈಗ ರಾಹುಲ್ ಗಾಂಧಿ ಅದನ್ನು ಜಾರಿ ಮಾಡುವುದಾಗಿ ಹೇಳಿದ್ದಾರೆ. ಇದಕ್ಕೆ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಕೇವಲ ಸಮೀಕ್ಷೆ ಮಾಡುತ್ತೇವೆ ಅಂತ ಹೇಳುತ್ತಿದ್ದಾರೆ. ಅವರ ನಿಲುವು ಏನು ಎಂದು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಪ್ರಚಾರ ಸಂದರ್ಭದಲ್ಲಿ ಸಂಸದ ಶಿವಕುಮಾರ ಉದಾಸಿ, ಮಾಜಿ ಸಚಿವ ಮನೋಹರ ತಹಸೀಲ್ದಾರ, ಮಾಜಿ ಶಾಸಕ ಶಿವರಾಜ ಸಜ್ಜನ ಹಾಜರಿದ್ದರು.

### ನೆಹರು ಕುಟುಂಬದ ಆಸ್ತಿ ಮಾತ್ರ ಹೆಚ್ಚಳ

ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಭಗತ್ ಸಿಂಗ್ ಸೇರಿದಂತೆ ಅನೇಕ ವೀರರು ಪ್ರಾಣ ಕಳೆದುಕೊಂಡಿದ್ದಾರೆ. ಅವರಿಗೆ ಸ್ವಾತಂತ್ರ್ಯದ ಲಾಭ ದೊರೆಯಲಿಲ್ಲ. ಕೇವಲ ನೆಹರೂ, ಗಾಂಧಿ ಕುಟುಂಬಕ್ಕೆ ಮಾತ್ರ ಲಾಭ ಸಿಕ್ಕಿದೆ. ಬಡತನ ನಿರ್ಮೂಲನೆ ಮಾಡುತ್ತೇವೆ ಅಂತ ಇಂದಿರಾ ಗಾಂಧಿ ಹೇಳಿದರು. ಆದರೆ, ಅವರ ಕುಟುಂಬದ ಆಸ್ತಿ ಮಾತ್ರ ಹೆಚ್ಚಳ ಮಾಡಿಕೊಂಡರು. ಅಂಬಾನಿ, ಅದಾನಿಯವರ ಆಸ್ತಿ ಹೆಚ್ಚಳವಾಗುವಂತೆ ಮಾಡಿದವರು ಕಾಂಗ್ರೆಸ್ ನವರು. ಪಿತ್ರಾರ್ಜಿತ ಆಸ್ತಿಯನ್ನು ಹಂಚಿಕೆ ಮಾಡುವುದಾಗಿ ಹೇಳಿದ್ದಾರೆ. ನಿಮ್ಮ ಆಸ್ತಿ ಉಳಿಯಬೇಕೆಂದರೆ ಬಿಜೆಪಿಗೆ ಹಾಕಿ, ಸರ್ಕಾರಕ್ಕೆ ಹೋಗಬೇಕೆಂದರೆ ಕಾಂಗ್ರೆಸ್‌ಗೆ ಮತ ಹಾಕಿ ಎಂದು ಹೇಳಿದರು.

### ಮೇ 7 ಕ್ಕೆ ಚೊಂಬು

ನಾವು ಹಾನಗಲ್ ತಾಲೂಕಿನಲ್ಲಿ ತಿಳವಳ್ಳಿ, ಮಾರನಗುಡಿ ಏತ ನೀರಾವರಿ ಯೋಜನೆ ಜಾರಿ ಮಾಡಿದ್ದೇವೆ. ಮಾಳಗಿ ಡ್ಯಾಮ್ 16 ಅಡಿ ಇದ್ದಾಗ ನೀರು ಬಿಟ್ಟಿದ್ದೇವು. ಇವರು 20 ಅಡಿ ಇದ್ದರೂ ನೀರು ಬಿಡುತ್ತಿಲ್ಲ. ಇವರಿಗೆ ರೈತರ ಬಗ್ಗೆ ಕಾಳಜಿಯಿಲ್ಲ.

ಈ ಸರ್ಕಾರ ರೈತರು, ಮಹಿಳೆಯರು, ದಲಿತರಿಗೆ ಚೊಂಬು ಕೊಟ್ಟಿದೆ, ಮೇ 7 ರಂದು ಬಿಜೆಪಿಗೆ ಮತ ಹಾಕುವ ಮೂಲಕ ಕಾಂಗ್ರೆಸ್‌ಗೆ ಚೊಂಬು ಕೊಡಬೇಕು ಎಂದು ಬಸವರಾಜ್ ಬೊಮ್ಮಾಯಿ ಹೇಳಿದರು.

### ಕಾವ್ಯ-ಕುಂಚ-ಗಾಯನ, ಕಲಾಪ್ರದರ್ಶನ, ಸನ್ಮಾನ ಇಂದು

# 'ವಿಶ್ವ ಕಲಾ ದಿನಾಚರಣೆ' ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ಹಾಗೂ ದೃಶ್ಯ ಕಲಾವಿದರು ಸಂಘ ಗದಗ ವತಿಯಿಂದ ಶನಿವಾರ ಸಂಜೆ 6 ಗಂಟೆಗೆ ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ವಿಶ್ವ ಕಲಾ ದಿನದ ಅಂಗವಾಗಿ ಕಾವ್ಯ-ಕುಂಚ-ಗಾಯನ, ಕಲಾ ಪ್ರದರ್ಶನ, ಸಂಮಾನ ಕಾರ್ಯಕ್ರಮ ಜರುಗಲಿದೆ.

ಉದ್ಘಾಟನೆಯನ್ನು ವಿಜಯ ಲಲಿತಕಲಾ ಸಂಸ್ಥೆಯ ಅಧ್ಯಕ್ಷ ಪ್ರೊ. ಅಶೋಕ ಅಕ್ಕಿ ನೆರವೇರಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಲಲಿತ ಕಲಾ ಅಕಾಡೆಮಿಯ ಕಲೇಗಾರ ಸದಸ್ಯ ಡಾ. ಬಸವರಾಜ ಎಸ್. ಭಾಗವಹಿಸುವರು. ಕಲಾ ಸಾಧಕರನ್ನು ಸಾಹಿತಿ ಪ್ರೊ. ಅನ್ನದಾನಿ



ಹಿರೇಮಠ ಸನ್ಮಾನಿಸುವರು. ದೃಶ್ಯ ಕಲಾವಿದರ ಸಂಘದ ಅಧ್ಯಕ್ಷ ಡಾ. ಬಿ.ಎಲ್. ಚವ್ಹಾಣ ಉಪಸ್ಥಿತರಿರುವರು. ಆತಿಥ್ಯವನ್ನು ಚಿತ್ರಕಲಾ ಶಿಕ್ಷಕರಾದ ರಮೇಶ ಮುರಗೋಡ, ನಜೀರಹ್ಮದ ಡಂಬಳ ಕಡಕೋಳ ವಹಿಸುವರು.

ಕಾವ್ಯ-ಕುಂಚ-ಗಾಯನದಲ್ಲಿ ನಜೀರಹ್ಮದ ಡಂಬಳ, ಎ.ಎಸ್. ಮಕಾನದಾರ, ಶಿವರಾಜ ಕಮ್ಮಾರ, ಮರುಳಸಿದ್ಧಪ್ಪ ದೊಡ್ಡಮನಿ, ಪ್ರೊ. ಬಿ.ಸಿ. ಕುತ್ನಿ, ಶಾರದಾ ಬಾಣದ, ಪ್ರೊ. ಬಸವರಾಜ ನೆಲಜೇರಿ, ಅಕ್ಕಮಹಾದೇವಿ ಕಮತ, ಬಿ.ಕೆ. ಬಡಿಗೇರ, ಡಾ. ವಿನಾಯಕ ಕಮತದ, ಸವಿತಾ ಗುಡ್ಡದ, ಸಂಜಯ ತೆಂಬದಮನಿ, ಎಸ್.ಎಸ್. ಚಿಕ್ಕಮಠ ಭಾಗವಹಿಸುವರು.

ವಿಜಯ ಕಲಾ ಮಂದಿರ ಚಿತ್ರಕಲಾ ಮಹಾವಿದ್ಯಾಲಯ, ವಿ.ಡಿ.ಎಸ್. ಜೆ.ಎನ್. ಚಿತ್ರಕಲಾ ಮಹಾವಿದ್ಯಾಲಯ, ವಿಜಯ ಲಲಿತಕಲಾ ಕಾಲೇಜು ಇವರು ಕಾರ್ಯಕ್ರಮಕ್ಕೆ ಸಹಕಾರ ನೀಡಿದ್ದಾರೆ.

ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು, ಪರಿಷತ್ತಿನ ಆಜೀವ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಕೋಶಾಧ್ಯಕ್ಷ ಈರಣ್ಣ ಮಾದರ, ಸಹ ಕಾರ್ಯದರ್ಶಿಗಳಾದ ಡಾ. ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ, ದೃಶ್ಯಕಲಾವಿದರ ಸಂಘದ ಕಾರ್ಯದರ್ಶಿ ಷಹಜಹಾನ ಮುದಕವಿ, ಸಂಚಾಲಕ ಪ್ರೊ. ಬಿ.ಜಿ. ನೆಲಜೇರಿ, ಪ್ರೊ. ಪಿ.ಬಿ. ಬಂಡಿ, ಪ್ರೊ. ಬಿ.ಸಿ ಕುತ್ನಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ದೃಶ್ಯ ಕಲೆಯಲ್ಲಿ ಸಾಧನೆ ಮಾಡಿದ ಡಾ. ಬಿ.ಎಲ್. ಚವ್ಹಾಣ, ಡಾ. ಬಸವರಾಜ ಕಲೇಗಾರ, ಕೃಷ್ಣಾ ಕೆ.ಎಂ., ಷಹಜಹಾನ ಮುದಕವಿ, ಡಾ. ಸಿ.ವಿ. ಬಡಿಗೇರ, ಎನ್.ಬಿ. ಪರ್ವತಗೌಡ್ರ, ಕೆ.ಬಿ. ಬಡಿಗೇರ ಇವರನ್ನು ಸನ್ಮಾನಿಸಲಾಗುವುದು.

## ಹಾಸನ ಜಿಲ್ಲೆಯಲ್ಲೊಂದು ಅಪರೂಪದ ಪ್ರಸಂಗ

■ ವಿಜಯಸಾಕ್ಷಿ ಸುದ್ದಿ, ಹಾಸನ

ಹಾಸನ ಜಿಲ್ಲೆಯಲ್ಲೊಂದು ಅಪರೂಪದ ಪ್ರಸಂಗ ನಡೆದಿದೆ. ಬಹಳ ವರ್ಷಗಳ ನಂತರ ಭೇಟಿಯಾದ ಗೆಳತಿಯರು ತಬ್ಬಿ ಮಾತಾಡಿದ್ದಾರೆ ಮತದಾನ ಮಾಡಲು ಬಂದಾಗ ಮುಖಾಮುಖಿಯಾದ ಗೆಳತಿಯರು ಸಂಭ್ರಮಪಟ್ಟಿದ್ದಾರೆ.

ಗುಳಗಳಲೆ ಗ್ರಾಮದ ಮತಗಟ್ಟೆಯಲ್ಲಿ ಮತದಾನ ಮಾಡಲು ಬಂದ ಜಾನಮ್ಮ (94), ಫಾತಿಮಾ (93) ಸುಮಾರು ಹತ್ತಾರು ವರ್ಷಗಳ ನಂತರ ಭೇಟಿಯಾದರು. ಮುಖಾಮುಖಿಯಾದ ಕೂಡಲೇ ಇಬ್ಬರು ಸಂತಸದಿಂದ ತಬ್ಬಿಕೊಂಡರು. ಈ ಅಪರೂಪದ ಕ್ಷಣಕ್ಕೆ ಸಾಕ್ಷಿಯಾಗಿದ್ದು ಸಕಲೇಶಪುರ



ತಾಲೂಕಿನ ಗುಳಗಳಲೆ ಗ್ರಾಮದ ಮತಗಟ್ಟೆ.

ಮದುವೆಯಾದ ನಂತರ ಮತ್ತೆ ಭೇಟಿಯಾಗದ ಗೆಳತಿಯರು ಇಂದು ಭೇಟಿಯಾಗಿ ತುಂಬಾ ಖುಷಿಪಟ್ಟರು.

ಗೆಳೆತನಕ್ಕೆ ಯಾವುದೇ ಧರ್ಮ, ಜಾತಿ, ಮತ, ವಯಸ್ಸಿನ ಹಂಗಿಲ್ಲ ಎಂಬುದನ್ನು ಇಲ್ಲಿ ಕಾಣಬಹುದು. ಅಲ್ಲಿರುವುದೊಂದೇ ನಿಷ್ಕಲ್ಮಶ ಪ್ರೀತಿ, ಸ್ನೇಹ ಎಂಬ ಬಾಂಧವ್ಯ.

## ರಾಜ್ಯದ 14 ಕ್ಷೇತ್ರಗಳಲ್ಲಿ ಮೊದಲ ಹಂತದ ಮತದಾನ ಮುಕ್ತಾಯ, 64.37% ರಷ್ಟು ಮತದಾನ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲೋಕಸಭಾ ಚುನಾವಣೆಯ ಮೊದಲ ಹಂತದ ಮತದಾನ ಶುಕ್ರವಾರ ರಾಜ್ಯದ 14 ಕ್ಷೇತ್ರಗಳಲ್ಲಿ ಸಣ್ಣಪುಟ್ಟ ಘಟನೆಗಳನ್ನು ಹೊರತುಪಡಿಸಿ ಶಾಂತಿಯುತವಾಗಿ ನಡೆಯಿತು.





### ರಾಜ್ಯದ ೧೪ ಕ್ಷೇತ್ರಗಳಲ್ಲಿ ನಡೆದ ಶೇಖಡಾವಾರು ಮತದಾನದ ವಿವರ ಈ ಕೆಳಕಂಡಂತಿದೆ.

ರಾಜ್ಯದಲ್ಲಿ ಇಂದು ನಡೆದ ಚುನಾವಣೆಯಲ್ಲಿ ಶೇ. 64.37ರಷ್ಟು ಮತದಾನ ನಡೆಯಿತು.

ಬೆಂಗಳೂರು ಸೆಂಟ್ರಲ್ – 49.21%
ಬೆಂಗಳೂರು ಉತ್ತರ – 50.91%
ಬೆಂಗಳೂರು ಗ್ರಾಮಾಂತರ – 61.78%
ಬೆಂಗಳೂರು ದಕ್ಷಿಣ – 49.37%
ಚಾಮರಾಜನಗರ – 69.60%
ಚಿಕ್ಕಬಳ್ಳಾಪುರ – 71.85%
ಚಿತ್ರದುರ್ಗ –67.52%
8.ದಕ್ಷಿಣ ಕನ್ನಡ – 71.83%
ಹಾಸನ – 72.13%
ಕೋಲಾರ – 73.25%
ಮಂಡ್ಯ – 74.87%
ಮೈಸೂರು – 66.96%
ಉಡುಪಿ-ಚಿಕ್ಕಮಗಳೂರು – 72.69%
ತುಮಕೂರು–72.10%

ಅತಿಹೆಚ್ಚು ಮತದಾನ ಮಂಡ್ಯದಲ್ಲಿ ನಡೆದಿದ್ದರೆ, ಅತಿ ಕಡಿಮೆ ಮತದಾನ ಬೆಂಗಳೂರು ಸೆಂಟ್ರಲ್ ಕ್ಷೇತ್ರದಲ್ಲಿ ನಡೆದಿದೆ. ಬೆಂಗಳೂರಿನ ಎಲ್ಲ ಕ್ಷೇತ್ರಗಳಲ್ಲಿ ಎಂದಿನಂತೆ ಕಡಿಮೆ ಪ್ರಮಾಣದ ಮತದಾನವಾಗಿದೆ.



## ಶಾಬಾದಿಮಠರ ಮನೆಗೆ ಭೇಟಿ ನೀಡಿ ಮತಯಾಚಿಸಿದ ಗಡ್ಡದೇವರಮಠ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಪಿ.ಸಿ.ಶಾಬಾದಿಮಠ ಪ್ರಿಂಟರ್ಸ್ ಮಾಲೀಕರ ಮನೆಗೆ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಭೇಟಿ ನೀಡಿ ಚುನಾವಣೆಯಲ್ಲಿ ತಮಗೆ ಆಶೀರ್ವಾದ ಮಾಡಬೇಕು ಎಂದು ಮನವಿ ಮಾಡಿದರು.

ರಾಜ್ಯದ ಮುದ್ರಣ ರಂಗದಲ್ಲಿ ಪಿ.ಸಿ.ಶಾಬಾದಿಮಠ ಪ್ರಿಂಟರ್ಸ್ ಅವರ ಹೆಸರು ಅತಿ ದೊಡ್ಡದು. ತಾವು ತಮ್ಮ ಗೆಳೆಯರ ಬಳಗ ಹಾಗೂ ನಿಮ್ಮ ಪ್ರಿಂಟಿಂಗ್ ಪ್ರೆಸ್ ಸಿಬ್ಬಂದಿ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಿಸಬೇಕು ಎಂದು ವಿನಂತಿ ಮಾಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ನೀಡುತ್ತಿರುವ ಉತ್ತಮ ಕೊಡುಗೆಗಳು



ಹಾಗೂ ಜನಕಲ್ಯಾಣ ಯೋಜನೆಗಳ ಬಗ್ಗೆ ಗಡ್ಡದೇವರಮಠ ಸಮಗ್ರ ಮಾಹಿತಿ ನೀಡಿದರು.

ಕೇಂದ್ರ ಬಿಜೆಪಿ ಸರಕಾರದ ನಿರ್ಲಕ್ಷ್ಯ, ಸುಳ್ಳು ಭರವಸೆಗಳು ಜನರ ಮನದಲ್ಲಿ ಬಿಜೆಪಿ ಕುರಿತು ಭ್ರಮನಿರಸನ ಉಂಟು ಮಾಡಿವೆ ಎಂಬುದೂ ಎದ್ದು ಕಾಣುತ್ತಿದೆ. ಹಾಗಾಗಿ ಈ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಬಹುಮತ ಸಾಧಿಸುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಅವರು ಹೇಳಿದರು.

ಗ್ರಾಮೀಣ ಜನರ ಈ ಅಭಿಮಾನ ಮತವಾಗಿ ಪರಿವರ್ತನೆಯಾಗಬೇಕಿದೆ. ಕಾಂಗ್ರೆಸ್ ಅಭ್ಯರ್ಥಿಯಾದ ನನಗೆ ತಾವು ಮತ ನೀಡಿ ಗೆಲ್ಲಿಸಿ ತಮ್ಮ ಸೇವೆ ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿಕೊಂಡರು.

ಶಾಬಾದಿಮಠ ಅವರು ತಮ್ಮ ಮನೆಗೆ ಭೇಟಿ ನೀಡಿದ ಆನಂದಸಾಮಿ ಗಡ್ಡದೇವರಮಠ ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡು ಉಪಚರಿಸಿ ಅವರೊಂದಿಗೆ ಉಭಯ ಕುಶಲೋಪರಿ ನಡೆಸಿದರು.

ನಂತರ ಅವರು ಮಾತನಾಡಿ, ಈ ಬಾರಿ ಮಹತ್ತರ ಬದಲಾವಣೆಯಾಗಲಿದ್ದು ಎಲ್ಲ ಕಡೆಯೂ ಕಾಂಗ್ರೆಸ್ ಪರವಾದ ಅಲೆ ಕಾಣುತ್ತಿದೆ. ಉತ್ತಮವಾಗಿ ಕೆಲಸ ಮಾಡುತ್ತ ಜನಪರ ಯೋಜನೆಗಳನ್ನು ನೀಡುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುವುದಾಗಿ ಅವರು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅನೇಕ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

## ಗ್ಯಾರಂಟಿಗಳ ಬಗ್ಗೆ ಟೀಕೆ ಮಾಡುವದು ತರವಲ್ಲ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ನುಡಿದಂತೆ ಐದೂ ಗ್ಯಾರಂಟಿಗಳನ್ನು ಜಾರಿಗೆಗೊಳಿಸಿದೆ. ಅದೇ ರೀತಿ ಕೇಂದ್ರದಲ್ಲಿ ಕಾಂಗ್ರೆಸ್ ಸರಕಾರ ಬಂದರೆ ಲೋಕಸಭಾ ಚುನಾವಣೆ ಪ್ರಣಾಳಿಕೆಯಲ್ಲಿ ನೀಡಿದ ಗ್ಯಾರಂಟಿಗಳನ್ನು ಜಾರಿಗೊಳಿಸಲು ಪಕ್ಷ ಬದ್ಧವಾಗಿದೆ ಎಂದು ರಾಮಗೇರಿ ಗ್ರಾಮದ ಕಾಂಗ್ರೆಸ್ ಮುಖಂಡ ಸೋಮಣ್ಣ ಬೇಟಗೇರಿ ಹೇಳಿದರು.

ಅವರು ಶಿಗ್ಲಿ ವ್ಯಾಪ್ತಿಯ ರಾಮಗೇರಿ ಗ್ರಾಮದಲ್ಲಿ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್‌ಗಳ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ನುಡಿದಂತೆ ನಡೆಯುವ ಕಾಂಗ್ರೆಸ್ ಪಕ್ಷ ನೀಡಿದ ಗ್ಯಾರಂಟಿ ಗಳನ್ನು ಟೀಕೆ ಮಾಡುವದು ಬಡವರ ಯೋಜನೆಗಳು ಅನೂಕೂಲ ತೆಗಳನ್ನು ಅಣಕಿಸಿದಂತೆ.



ಯೋಜನೆಗಳು ಬಡವರಿಗೆ ನ್ಯಾಯಯುತವಾಗಿ ತಲುಪಿವೆ. ಇದು ವಿರೋಧ ಪಕ್ಷಗಳಿಗೆ ನುಂಗಲಾರದ ತುತ್ತಾಗಿದ್ದು, ಅವುಗಳನ್ನು ಟೀಕೆ ಮಾಡುವ ಕಾಯಕ ಮಾಡುತ್ತಿವೆ ಎಂದು ಆರೋಪಿಸಿದರು.

ಈ ಬಾರಿ ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಪಕ್ಷ ಅಧಿಕಾರಕ್ಕೆ ಬಂದರೆ ಅನೇಕ ಗ್ಯಾರಂಟಿಗಳನ್ನು ನೀಡಿದ್ದು ಅವುಗಳನ್ನು ಈಡೇರಿಸುವದರು ಕಾಂಗ್ರೆಸ್ ಪಕ್ಷ ಮಾತ್ರ. ಈ ಹಿನ್ನೆಲೆಯಲ್ಲಿ ಈ ಬಾರಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಹೆಚ್ಚಿನ ಮತಗಳಿಂದ ಗೆಲ್ಲಿಸಬೇಕು ಎಂದು ಹೇಳಿದರು.

ರಾಮಗೇರಿ ಗ್ರಾ.ಪಂ ಅಧ್ಯಕ್ಷೆ ಅಡಿವೆಕ್ಕ ಬೆಟಗೇರಿ ಗ್ಯಾರಂಟಿ ಕಾರ್ಡ್‌ಗಳ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಶೇಖಣ್ಣ ಕಾಳೆ, ಲಕ್ಷ್ಮೇಶ್ವರ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸರ್ಫರಾಜ ಸೂರಣಗಿ, ಗ್ರಾಂ.ಪಂ ಸದಸ್ಯೆ ಈರಮ್ಮ ಮಡಿವಾಳರ, ನಾಗರಾಜ ಮಡಿವಾಳರ, ಪ್ರಚಾರ ಸಂಯೋಜಕ ರಾಜು ಓಲೆಕಾರ, ಬಸವರಾಜ ಬೆಟಗೇರಿ, ಪರಸಪ್ಪ ಯಂಗಾಡಿ, ಶಿವಪ್ಪ ಗೊಂದಿ, ಪರಸಪ್ಪ ಲಕ್ಕಣ್ಣನವರ, ದೊಡ್ಡಬಸಪ್ಪ ಗೊಂದಿ,ಶಫಿ ಬಿಜಾಪುರ, ಪಾತಿಮಾ ನದಾಫ, ಶಬೀನಾ ನದಾಫ್, ಶಬೀನಾ ತಂಬಾಕ, ಮಂಜುಳಾ ಮಲ್ಲೂರ, ಲಲಿತ ಬೆಟಗೇರಿ, ಹನುಮವ್ವ ಬೆಟಗೇರಿ ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka